ಸಂಪುಟ : 9 ಸಂಚಿಕೆ 297 ಪುಟ : 4+2 ಬೆಲೆ: 3.00 ಬುಧವಾರ ಜನವರಿ 8 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 297 Pages : 4+2 Price : 3.00 Wednesday January 8 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ನೀರು ಪೂರೈಕೆಯಲ್ಲಿ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರಕ್ಕೆ ಸಗಟು ನೀರು ಸರಬರಾಜು ಮಾಡುವ ಹಮ್ಮಿಗಿ ಜ್ಯಾಕ್‌ವೆಲ್‌ದಿಂದ ಡಂಬಳ ಮಧ್ಯಂತರ ಪಂಪಿಂಗ್ ಸ್ಟೇಷನ್‌ಗೆ ಬರುವ ಸಿಂಗಟಾಲೂರ ಹಿಂಭಾಗದಲ್ಲಿ ಮುಖ್ಯ ಕೊಳವೆ ಮಾರ್ಗಗಳ ದುರಸ್ತಿ ಕಾರ್ಯವನ್ನು ಯುದ್ಧೋಪಾದಿಯಲ್ಲಿ ಕೈಗೆತ್ತಿಕೊಳ್ಳಲಾಗಿದೆ. ಸದರ ದುರಸ್ತಿ ಕಾರ್ಯ ಪೂರ್ಣಗೊಳ್ಳುವವರೆಗೂ ನೀರು ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುವುದರಿಂದ ಸಾರ್ವಜನಿಕರು ನಗರಸಭೆಯೊಂದಿಗೆ ಸಹಕರಿಸಬೇಕು.

ಗದಗ-ಬೆಟಗೇರಿ ಅವಳಿ ನಗರದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ, ತಮ್ಮ ನೀರಿನ ಕರವನ್ನು ತುಂಬಬೇಕು. ಒಂದು ವೇಳೆ ಬಾಕಿ ಉಳಿದ ನೀರಿನ ಬಿಲ್ ತುಂಬದೇ ಹೋದರೆ, ನಳಗಳನ್ನು ಬಂದ್ ಮಾಡಲಾಗುತ್ತದೆ. ನೀರಿನ ಕರವನ್ನು ತುಂಬಲು ಗದಗ-ಬೆಟಗೇರಿ ನಗರಸಭೆಯ ಪ್ರಕಟಣೆ ತಿಳಿಸಿದೆ.

## ಗದುಗಿನ ಹಿರಿಯ ಕಲಾವಿದ ಸಿದ್ದೇಶ್ವರ ಶಾಸ್ತ್ರೀ ತೆಲ್ಲೂರ ನಿಧನ

■ವಿಜಯಸಾಕ್ಷಿ ಸುದ್ದಿ, ಗದಗ



ಇಲ್ಲಿನ ಪಂಚಾಕ್ಷರ ನಗರದ ನಿವಾಸಿ, ರಾಜ್ಯ ಪ್ರಶಸ್ತಿ ವಿಜೇತರು, ಆಕಾಶವಾಣಿ, ದೂರದರ್ಶನ ಬಿಹೈಗ್ರೇಡ್ ಕಲಾವಿದ ಪಂ. ಸಿದ್ದೇಶ್ವರ ಶಾಸ್ತ್ರೀ ತೆಲ್ಲೂರ (63) ಸೋಮವಾರ ರಾತ್ರಿ ಹೃದಯಾಘಾತದಿಂದ ನಿಧನರಾದರು.

ಪತ್ನಿ, ಮೂವರು ಪುತ್ರಿಯರು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯು ಮಂಗಳವಾರ ಸಂಜೆ ಜರುಗಿತು. ರಾಜ್ಯ ಸರಕಾರದ, ಅಕಾಡೆಮಿಯ ಪ್ರಶಸ್ತಿ ಸೇರಿದಂತೆ ನಾಡಿನ ಹಲವಾರು ಮಠ-ಮಂದಿರಗಳು, ಸಂಘ-ಸಂಸ್ಥೆಗಳು ಇವರಿಗೆ ಪ್ರಶಸ್ತಿ-ಬಿರುದುಗಳನ್ನು ನೀಡಿ ಸನ್ಮಾನಿಸಿದ್ದನ್ನು ಇಲ್ಲಿ ಸ್ಮರಿಸಬಹುದು.

ನೂರಾರು ಕ್ಯಾಸೆಟ್‌ಗಳನ್ನು, ಹಲವಾರು ಮೌಲಿಕ ಗ್ರಂಥಗಳನ್ನು ಹೊರ ತಂದು ಸಂಗೀತ, ಸಾಹಿತ್ಯ, ಕೀರ್ತನ, ಪುರಾಣ, ಹರಿಕಥೆ ಕ್ಷೇತ್ರದಲ್ಲಿ ಹೆಸರಾಗಿದ್ದ ತೆಲ್ಲೂರ ಶಾಸ್ತ್ರೀಗಳ ಅಕಾಲಿಕ ನಿಧನಕ್ಕೆ ಗದುಗಿನ ವೀರೇಶ್ವರ ಪುಣ್ಯಾಶ್ರಮ ಪೀಠಾಧಿಪತಿಗಳಾದ ಕಲ್ಲಯ್ಯಜ್ಜನವರು ಸೇರಿದಂತೆ ನಾಡಿನ ಹಲವಾರು ಕಲಾವಿದರು ಸಂತಾಪ ವ್ಯಕ್ತಪಡಿಸಿದ್ದಾರೆ.

### ಗಡುವು ಮುಗಿದರೂ ರೈತರಿಗೆ ಪಾವತಿಯಾಗದ ಬಾಕಿ ಹಣ | ಜಿಲ್ಲಾಡಳಿತ ಭವನದೆದುರು ರೈತರ ಅಹೋರಾತ್ರಿ ಧರಣಿ

# ಆಡಳಿತಕ್ಕೆ ಚಾಟಿ ಬೀಸಿದ ಅನ್ನದಾತ

■ವಿಜಯಸಾಕ್ಷಿ ಸುದ್ದಿ, ಗದಗ

ರೈತರಿಂದ ಕಡಲೆ ಖರೀದಿಸಿ ವ್ಯಾಪಾರಿಯೊಬ್ಬ ಅನ್ನದಾತರಿಗೆ ಮೋಸ ಮಾಡಿ ಪರಾರಿಯಾಗಿದ್ದು, ಬಾಕಿ ಇರುವ ಹಣವನ್ನು ರೈತರಿಗೆ ಕೊಡಿಸಬೇಕೆಂದು ಆಗ್ರಹಿಸಿ ಅನ್ನದಾತರು ಜಿಲ್ಲಾಡಳಿತ ಭವನದ ಎದುರು ಅಹೋರಾತ್ರಿ ಧರಣಿ ಕೈಗೊಂಡಿದ್ದಾರೆ.

ಸೋಮವಾರ ರಾತ್ರಿಯಿಂದಲೇ ಜಿಲ್ಲಾಡಳಿತ ಭವನದ ಎದುರು ಅಹೋರಾತ್ರಿ ಧರಣಿ ನಡೆಸಿದ ಜಿಲ್ಲೆಯ ಕುರ್ತಕೋಟಿ, ಅಸುಂಡಿ, ಬಿಂಕದಕಟ್ಟಿ, ಅಂತೂರ ಬೆಂತೂರ ಸೇರಿ 11 ಗ್ರಾಮಗಳ ಕಡಲೆ ಮಾರಾಟ ಮಾಡಿದ ರೈತರಿಗೆ ಕೊಡಬೇಕಾದ ಹಣದಲ್ಲಿ 6 ಕೋಟಿಗೂ ಹೆಚ್ಚು ಹಣ ಬಾಕಿ ಇರಿಸಿಕೊಂಡಿದ್ದಾರೆ. ದಾವಣಗೆರೆ ಮೂಲದ ಕಡಲೆ ವ್ಯಾಪಾರಿ ಮಾರುತಿಗೌಡ ಅವರಿಂದ ರೈತರಿಗೆ ವಂಚನೆಯಾಗಿದ್ದು, ಮಹಿಳಾ ಸಂಘಗಳ ಮಧ್ಯಸ್ಥಿಕೆಯಲ್ಲಿ ಕಡಲೆ ಖರೀದಿ ಮಾಡಲಾಗಿತ್ತು. ಳೆದ ಹನ್ನೊಂದು ತಿಂಗಳಿಂದ ಹೋರಾಟ ಮಾಡುತ್ತಿರುವ ಅನ್ನದಾತರಿಗೆ ಇನ್ನೂ ಸಂಕಷ್ಟ ತಪ್ಪಿಲ್ಲ ಎಂದು ಆಕ್ರೋಶ ಹೊರಹಾಕಿದರು.



ಮಂಗಳವಾರ ನಗರದ ಜಿಲ್ಲಾಡಳಿತ ಕಛೇರಿ ಎದುರು ಬೃಹತ್ ಪ್ರತಿಭಟನೆ ನಡೆಸಿ ಸರ್ಕಾರದ ವಿರುದ್ಧ ಬಾರಕೋಲ್ ಚಾಟಿ ಬೀಸಿ, ಒನಕೆ ಹಿಡಿದು, ಕಚೇರಿಯ ಗೇಟ್‌ಗೆ ಜಾನುವಾರು ಕಟ್ಟಿ, ಪ್ರತಿಭಟನೆ ನಡೆಸಿ ಸುಮಾರು ಮೂರು ಗಂಟೆಗಳ ಕಾಲ ಮಾನವ ಸರಪಳಿ ನಿರ್ಮಿಸಿ ಗದಗ ಹುಬ್ಬಳ್ಳಿ ರಸ್ತೆ ಬಂದ್ ಮಾಡಿ ಪ್ರತಿಭಟಿಸಿದ ರೈತರು ತಮ್ಮ ಆಕ್ರೋಶ ಹೊರಹಾಕಿದರು.

ಕಡಲೆ ವ್ಯಾಪಾರಿ ಮಾಡಿದ ಮೋಸದಿಂದ ಜಿಲ್ಲೆಯ ಸುಮಾರು 400ಕ್ಕೂ ಹೆಚ್ಚು ರೈತರಿಗೆ ಅನ್ಯಾಯವಾಗಿದ್ದು, ಕಡಲೆ ಮಾರಿದ ಹಣದ ಬಾಕಿ 6 ಕೋಟಿ 50 ಲಕ್ಷ ರೂಪಾಯಿ ಹಣವನ್ನು ರೈತರು ಕಳೆದುಕೊಂಡಿದ್ದಾರೆ. ಈ.ಪಂ ಎನ್.ಆರ್.ಎಲ್. ಎಮ್ ಸಂಜೀವಿನಿ ಒಕ್ಕೂಟದಿಂದ ಕಡಲೆ ಖರೀದಿ ಮಾಡಿದ ದಲ್ಲಾಳಿಗಳು ರೈತರಿಗೆ ಹಣ ನೀಡದೆ ವಂಚನೆ ಮಾಡಿದ್ದಾರೆ. ಈ ವಿಚಾರವಾಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್‌ಗೆ ಸಾಕಷ್ಟು ಬಾರಿ ಮನವಿ ಮಾಡಿದರೂ ಸ್ಪಂದನೆ ಸಿಕ್ಕಿಲ್ಲ ಎಂದು ರೈತರು ತಮ್ಮ ಅಳಲನ್ನು ತೋಡಿಕೊಂಡರು.

> ಈ ಹಿಂದೆ ರೈತರು ತಮ್ಮ ಬಾಕಿ ಹಣವನ್ನು ಕೊಡಿಸುವಂತೆ ಹೋರಾಟ ನಡೆಸಿದಾಗ ಜಿಲ್ಲಾಡಳಿತ ಮಧ್ಯಸ್ಥಿಕೆ ವಹಿಸಿ ಹಣವನ್ನು ಕೊಡಿಸುವುದಾಗಿ ಭರವಸೆ ನೀಡಿತ್ತು. ಈ ಸಂದರ್ಭದಲ್ಲಿ ರೈತರು ಜನವರಿ 5ರವರೆಗೆ ಗಡುವು ನೀಡಿದ್ದರು. ಆದರೆ ಸಮಸ್ಯೆ ಬಗೆಹರಿಯದ ಕಾರಣ ಸೋಮವಾರದಿಂದ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಅಹೋರಾತ್ರಿ ಹೋರಾಟ ಆರಂಭಿಸಿದರು.

ಜಿಲ್ಲಾಧಿಕಾರಿಗಳನ್ನು ಕಚೇರಿ ಬಿಟ್ಟು ಹೊರ ಬರದಂತೆ ಮಾಡೋಣ ಎಂದು ರೈತರು ಪಟ್ಟು ಹಿಡಿದಿದ್ದು, ಜಿಲ್ಲಾಧಿಕಾರಿ ಕಚೇರಿ ಎದುರಿನಲ್ಲಿಯೇ ಅಡುಗೆ ಮಾಡಿ ರಾತ್ರಿ ಊಟವನ್ನೂ ಅಲ್ಲಿಯೇ ಮಾಡಿದ್ದಾರೆ. ಸಾಲ-ಸೋಲ ಮಾಡಿ, ಹವಾಮಾನ ವೈಪರಿತ್ಯದ ನಡುವೆಯೂ ಕೃಷಿಯನ್ನು ಮುಂದುವರೆಸಿಕೊಂಡು ಬರುತ್ತಿರುವ ಅನ್ನದಾತರಿಗೆ ಈ ಸ್ಥಿತಿ ಬಂದೊದಗಿರುವುದು ವಿಷಾದನೀಯ. ಧರಣಿ ಹಾಗೂ ಬಾಕಿ ಹಣ ಕೊಡಿಸುವ ವಿಚಾರವಾಗಿ ಜಿಲ್ಲಾಡಳಿತದ ನಡೆಯೇನು ಎಂದು ಕಾದು ನೋಡಬೇಕಿದೆ.

### ಕೂಸಿನ ಮನೆ ಆರೈಕೆದಾರರ ತರಬೇತಿ ಕಾರ್ಯಕ್ರಮ ಉದ್ಘಾಟಿಸಿದ ದೇವರಾಜ್ ಸಜ್ಜನಶೆಟ್ಟರ

# ವಹಿಸಿದ ಜವಾಬ್ದಾರಿಯನ್ನು ಪ್ರಾಮಾಣಿಕವಾಗಿ ನಿರ್ವಹಿಸಿ

■ವಿಜಯಸಾಕ್ಷಿ ಸುದ್ದಿ, ರೋಣ

ಕೂಸಿನ ಮನೆಯಲ್ಲಿ ಮಕ್ಕಳ ಲಾಲನೆ ಪಾಲನೆ ಮಾಡುವುದು ನಿಮ್ಮ ಕರ್ತವ್ಯವಾಗಿರುತ್ತದೆ. ಈ ಸಂದರ್ಭದಲ್ಲಿ ಯಾವುದೇ ಭೇದ-ಭಾವ ಮಾಡದೇ ತಮಗೆ ವಹಿಸಿದ ಜವಾಬ್ದಾರಿಯನ್ನು ಪ್ರಾಮಾಣಿಕವಾಗಿ ನಿರ್ವಹಿಸಿ ಎಂದು ರೋಣ ತಾ.ಪಂ ವ್ಯವಸ್ಥಾಪಕ ದೇವರಾಜ್ ಸಜ್ಜನಶೆಟ್ಟರ ಅಭಿಮತ ವ್ಯಕ್ತಪಡಿಸಿದರು.

ರೋಣ ಪಟ್ಟಣದ ಸಾಮರ್ಥ್ಯ ಸೌಧದಲ್ಲಿ ಮಂಗಳವಾರದಿಂದ 7 ದಿನಗಳ ಕಾಲ ಕೂಸಿನ ಮನೆ ಆರೈಕೆದಾರರ ತರಬೇತಿ ಕಾರ್ಯಕ್ರಮದ ಉದ್ಘಾಟನಾ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಎಸ್.ಐ.ಆರ್.ಡಿ ಮೈಸೂರು ಸಂಸ್ಥೆಯ ಬೋಧಕರಾದ ಮಲ್ಲಿಕಾರ್ಜುನ ಸ್ವಾಮಿ, ಕೂಸಿನ ಮನೆಯ ಆರೈಕೆದಾರರು ಕೇವಲ ವೇತನಕ್ಕಾಗಿ ದುಡಿಯದೇ ಮಕ್ಕಳ ಸೇವೆಯನ್ನು ಮಾಡುತ್ತಿದ್ದೇವೆಂದು ತಿಳಿದು ಕೆಲಸ ಮಾಡಬೇಕು.



ಅಲ್ಲದೆ ನರೇಗಾ ಕೂಲಿಕಾರರ ಮಕ್ಕಳಲ್ಲಿ ಉತ್ತಮ ಸಂಸ್ಕಾರ ಬೆಳೆಸುವ ಕಾರ್ಯವನ್ನು ಆರೈಕೆದಾರರು ಮಾಡಬೇಕು. ಆತ್ಮವಿಶ್ವಾಸದಿಂದ ಕೂಸಿನ ಮನೆಯನ್ನು ಆರೈಕೆದಾರರು ನಿರ್ವಹಿಸಬೇಕು. ಗ್ರಾಮಸ್ಥರ ಮತ್ತು ನರೇಗಾ ಕೂಲಿಕಾರರಲ್ಲಿ ಕೂಸಿನ ಮನೆಯ ಬಗ್ಗೆ ಹೆಚ್ಚು ವಿಶ್ವಾಸ ಮೂಡಿಸಿದ್ದೇ ಆದಲ್ಲಿ ಕೂಸಿನ ಮನೆಯಲ್ಲಿ ಮಕ್ಕಳ ಸಂಖ್ಯೆ ಹೆಚ್ಚಳಕ್ಕೆ ಕಾರಣವಾಗುತ್ತದೆ ಎಂದರು.

> ತರಬೇತಿ ಪಡೆದಿರುವ ಕೂಸಿನ ಮನೆಯ ಆರೈಕೆದಾರರು ತಮ್ಮ ಗ್ರಾ.ಪಂ ವ್ಯಾಪ್ತಿಯಲ್ಲಿ ಕಾರ್ಯಕ್ರಮವನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸುವಲ್ಲಿ ಶ್ರಮಿಸಬೇಕು. ಕೂಸಿನ ಮನೆಯಲ್ಲಿ ಮಕ್ಕಳ ಸುರಕ್ಷತೆ ಜೊತೆಗೆ ಮಕ್ಕಳ ಪಾಲಕರಲ್ಲೂ ಕೂಸಿನ ಮನೆಯ ಕಾರ್ಯಕ್ಷಮತೆಯ ಬಗ್ಗೆ ವಿಶ್ವಾಸ ಮೂಡಿಸುವ ಕೆಲಸವನ್ನು ಆರೈಕೆದಾರರು ಮಾಡಬೇಕು ಎಂದು ದೇವರಾಜ್ ಸಜ್ಜನಶೆಟ್ಟರ ತಿಳಿಸಿದರು.

. ಸಂಪನ್ಮೂಲ ವ್ಯಕ್ತಿಗಳಾದ ಲಲಿತಾ ಎಸ್.ಅಳವಂಡಿ, ಸರೋಜ ಬಡಿಗೇರ, ತಾಲೂಕಾ ಸಂಯೋಜಕ ಶರಣಪ್ಪ ಕೊತಬಾಳ, ವಿಷಯ ನಿರ್ವಾಹಕ ಎಚ್.ಕೆ. ದೇಸಾಯಿ ಉಪಸ್ಥಿತರಿದ್ದರು. ರೋಣ, ನರಗುಂದ ಹಾಗೂ ಗಜೇಂದ್ರಗಡ ತಾಲೂಕಿನ ಕೂಸಿನ ಮನೆಗಳ ಆರೈಕೆದಾರರು ತರಬೇತಿ ಕಾರ್ಯಕ್ರಮದಲ್ಲಿ ಹಾಜರಿದ್ದರು.

## ರೈತ ಬಾಂಧವರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನಲ್ಲಿ ಗದಗ ತಾಲೂಕಿನ ಕೃಷಿ ಇಲಾಖೆಯ ಪಿ.ಎಂ.ಕೆ.ಎಸ್.ವಾಯ್. ಯೋಜನೆ ಅಡಿಯಲ್ಲಿ ತುಂತುರು ನೀರಾವರಿ ಘಟಕ ಹಾಗೂ ಪಿ.ವಿ.ಸಿ. ಪೈಪುಗಳು ಲಭ್ಯವಿದ್ದು, ರೈತರು ನೀರಾವರಿ ಮೂಲ ಹೊಂದಿದವರು ಅಂದರೆ ಕೃಷಿ ಹೊಂಡ, ಬೋರವೆಲ್ ಹಾಗೂ ನಾಲಾ ಪಕ್ಕದಲ್ಲಿ ಜಮೀನು ಇರುವ ರೈತರು ಸೌಲಭ್ಯ ಪಡೆಯಲು ಅರ್ಹರಿದ್ದಾರೆ. ಈ ಹಿಂದೆ ಪಿ.ವಿ.ಸಿ ಪೈಪುಗಳನ್ನು ಪಡೆಯಲು ರೈತರು ಪೂರ್ಣ ಮೊತ್ತ ಪಾವತಿಸಿ ತಗೆದುಕೊಳ್ಳಬೇಕಾಗಿತ್ತು. ಆದರೆ ಈಗ ರೈತರ ವಂತಿಕೆ ಮಾತ್ರ ಪಾವತಿಸಿ ಸೌಲಭ್ಯ ಪಡೆಯಬಹುದಾಗಿದೆ. ಪಿ.ವಿ.ಸಿ. ಪೈಪ್‌ನ ದರ 63 ಎಂ.ಎಂ. 35 ಪೈಪುಗಳಿಗೆ, ರೈತರ ವಂತಿಕೆ ರೂ.9912/- 75 ಎಂ.ಎಂ.ಗೆ 26 ಪೈಪುಗಳಿಗೆ ರೈತರ ವಂತಿಕೆ ರೂ.9940/- ಹಾಗೂ 90 ಎಂ.ಎಂ. 18 ಪೈಪುಗಳಿಗೆ ರೈತರ ವಂತಿಕೆ ರೂ 9749/- ಇರುತ್ತದೆ. ಹೆಚ್ಚಿನ ಮಾಹಿತಿಗಾಗಿ ರೈತ ಸಂಪರ್ಕ ಕೇಂದ್ರ ಹುಲಕೋಟಿ ಹಾಗೂ ಬೆಟಗೇರಿ ಸಂಪರ್ಕಿಸಲು ಗದಗ ಸಹಾಯಕ ಕೃಷಿ ನಿರ್ದೇಶಕರಾದ ಮಲ್ಲಯ್ಯ ಕೊರವನವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಿವಯೋಗಿಗಳ ಚರಿತ್ರೆ ಸನ್ಮಾರ್ಗದ ದೀವಿಗೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಂತರು, ಶರಣರು, ಮಹಾತ್ಮರ ಜೀವನ ಚರಿತ್ರೆ ಬದುಕಿಗೆ ದಾರಿದೀಪವಾಗಿದ್ದು, ಅವರ ಜೀವನ ವೃತ್ತಾಂತ ಆಲಿಸುವುದರಿಂದ ಮನಸ್ಸಿನ ಕಲ್ಮಶಗಳು ಕಳೆಯುತ್ತವೆ ಎಂದು ಹೂವಿನಶಿಗ್ಲಿಯ ಶ್ರೀ ಚನ್ನವೀರಮಹಾಸ್ವಾಮಿಗಳು ಹೇಳಿದರು. ಅವರು ಶ್ರೀಮಠದ 46ನೇ ಜಾತ್ರಾ ಮಹೋತ್ಸವ ಮತ್ತು ಲಿಂ. ನಿರಂಜನ ಶ್ರೀಗಳ ಪುಣ್ಯಾರಾಧನೆ ಅಂಗವಾಗಿ ಮುಳುಗುಂದದ ಬಾಲಲೀಲಾ ಮಹಾಂತ ಶಿವಯೋಗಿಗಳ ಪುರಾಣ ಪ್ರವಚನ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಅಂತರಂಗದಲ್ಲಿ ಪ್ರೀತಿ, ದಯೆ, ಕರುಣೆ, ದಾನ-ಧರ್ಮ, ಸಂಸ್ಕಾರ, ಮಾನವೀಯ ಮೌಲ್ಯಗಳು ಒಡಮೂಡಲು ಮಹಾತ್ಮರ ಜೀವನ ಚರಿತ್ರೆ ಅರಿಯಬೇಕು. ಕತ್ತಲು ಕವಿದ ಬದುಕಿಗೆ ಬೆಳಕಿದ್ದಂತೆ. ಮಹಾತ್ಮ ಶ್ರೇಷ್ಠರಾದ ಮುಳುಗುಂದದ ಶ್ರೀ ಬಾಲಲೀಲಾ ಮಹಾಂತ ಶಿವಯೋಗಿಗಳ ಚರಿತ್ರೆ ಸನ್ಮಾರ್ಗದ ದೀವಿಗೆಯಾಗಿದ್ದು, ಈ ಪುರಾಣ ಕಾರ್ಯದಲ್ಲಿ ಪಾಲ್ಗೊಂಡು ಕೆಲ ತತ್ವ ವಿಚಾರಗಳನ್ನು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಜ. 1ರಿಂದ ಪ್ರಾರಂಭಗೊಂಡಿರುವ ಪುರಾಣ ಪ್ರವಚನ ಕಾರ್ಯಕ್ರಮದಲ್ಲಿ ಹೂವಿನಶಿಗ್ಲಿ ಸುತ್ತಮುತ್ತಲ ಗ್ರಾಮಗಳ ಭಕ್ತರು ಪಾಲ್ಗೊಳ್ಳುತ್ತಿದ್ದಾರೆ. ಕದಮನಹಳ್ಳಿಯ ಪಂಚಾಕ್ಷರಿ ಶಾಸ್ತ್ರಿಗಳು ಪ್ರವಚನಗೈಯುತ್ತಿದ್ದು ಅನಿಲಕುಮಾರ ಮಠಪತಿ, ಬಾಲಾಜಿ ಸಂಗೀತ ಸೇವೆ ನೀಡುತ್ತಿದ್ದಾರೆ.

### ಲಕ್ಕುಂಡಿ ಮೇಲಿರುವ ಪ್ರೀತಿ ಪುಟ್ಟರಾಜ ಸ್ಮಾರಕ ಭವನದ ಮೇಲೆ ಏಕಿಲ್ಲ: ವ್ಹಿ.ಆರ್. ಗೋವಿಂದಗೌಡ್ರ ಪ್ರಶ್ನೆ

# ಭಿಕ್ಷಾಟನೆ ಮಾಡಿಯಾದರೂ ಹಣ ಸಂಗ್ರಹಿಸುತ್ತೇವೆ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲರಿಗೆ ಇತ್ತೀಚಿನ ದಿನಗಳಲ್ಲಿ ಗದಗ ತಾಲೂಕಿನ ನರಗುಂದ ಮತಕ್ಷೇತ್ರ ವ್ಯಾಪ್ತಿಯ ಲಕ್ಕುಂಡಿ ಗ್ರಾಮದ ಮೇಲೆ ಏಕಾಏಕಿ ಪ್ರೀತಿ ಹೆಚ್ಚಾಗಿದ್ದು, ಲಕ್ಕುಂಡಿ ಮೇಲಿರುವ ಪ್ರೀತಿ ನಗರದ ಪುಟ್ಟರಾಜ ಸ್ಮಾರಕ ಭವನದ ಮೇಲೆ ಇಲ್ಲವೇಕೆ ಎಂದು ಜೆಡಿಎಸ್ ರಾಜ್ಯ ವಕ್ತಾರ ವ್ಹಿ.ಆರ್. ಗೋವಿಂದಗೌಡ್ರ ಪ್ರಶ್ನಿಸಿದರು.

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಸಚಿವರು ಸಾಕಷ್ಟು ಅನುದಾನವನ್ನು ಲಕ್ಕುಂಡಿಗೆ ಮೀಸಲಿಡುತ್ತಿದ್ದಾರೆ. ಆದರೆ, ತಮ್ಮನ್ನು ಆಯ್ಕೆ ಮಾಡಿದ ಗದಗ-ಬೆಟಗೇರಿ ನಗರವನ್ನು ಮರೆತು ಬಿಟ್ಟಿದ್ದಾರೆ. ಕಳೆದ ಹಲವು ವರ್ಷಗಳಿಂದ ನೆನೆಗುದಿಗೆ ಬಿದ್ದಿರುವ ಪುಟ್ಟರಾಜ ಸ್ಮಾರಕ ಭವನಕ್ಕೆ ಅನುದಾನವನ್ನು ಸಚಿವರು ನೀಡುತ್ತಿಲ್ಲ ಎಂದು ಎಚ್.ಕೆ. ಪಾಟೀಲರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.




> **ಸ್ಮಾರಕ ಭವನಕ್ಕಾಗಿ ಭಿಕ್ಷಾಟನೆ**
>
> ಸ್ಮಾರಕ ಭವನಕ್ಕೆ ಹಣ ಮಂಜೂರು ಮಾಡಲು ಸರ್ಕಾರದ ಬಳಿ ಹಣವಿಲ್ಲದಿದ್ದರೆ ಜಿಲ್ಲಾ ಜೆಡಿಎಸ್‌ನಿಂದ ಜನವರಿ 10ರಂದು ಸಾಂಕೇತಿಕವಾಗಿ ಮಠದ ಆವರಣದಲ್ಲಿ ಭಿಕ್ಷಾಟನೆ ಮಾಡುತ್ತೇವೆ. ಇದರಿಂದ ಎಚ್ಚೆತ್ತುಕೊಂಡು ಅನುದಾನ ನೀಡಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಜಿಲ್ಲೆಯ ಪ್ರತಿ ಮನೆಗೆ ಭೇಟಿ ನೀಡಿ ಹಣ ಸಂಗ್ರಹಿಸುತ್ತೇವೆ.
>
> **- ವ್ಹಿ.ಆರ್. ಗೋವಿಂದಗೌಡ್ರ.**
> **ರಾಜ್ಯ ಜೆಡಿಎಸ್ ವಕ್ತಾರರು.**

ಮುಂಬರುವ ವಿಧಾನಸಭೆ ಚುನಾವಣೆಯಲ್ಲಿ ಗದಗ ಶಹರ ಹಾಗೂ ಗ್ರಾಮೀಣ ಭಾಗವಾಗಿ ವಿಂಗಡಣೆಯಾಗುವ ಸಾಧ್ಯತೆ ಇದ್ದು, ಈ ಹಿನ್ನೆಲೆಯಲ್ಲಿ ತಮ್ಮ ರಾಜಕೀಯ ಜೀವನವನ್ನು ಭದ್ರಪಡಿಸಿಕೊಳ್ಳಲು ಸಚಿವರು ಪ್ರಯತ್ನಿಸುತ್ತಿದ್ದಾರೆ. ಪುಟ್ಟರಾಜ ಸ್ಮಾರಕ ಭವನಕ್ಕೆ ಒಂದು ರೂ ಹಣವನ್ನೂ ಸರ್ಕಾರ ನೀಡುತ್ತಿಲ್ಲ. ಮ್ಯೂಸಿಯಂಗೆ 7 ಕೋಟಿ ರೂ, ಲಕ್ಕುಂ-ಡಿಗೆ 5 ಕೋಟಿ ರೂ ಹಣ ಬಿಡುಗಡೆಗೊಳಿಸಿ ಪುಟ್ಟರಾಜರ ಸ್ಮಾರಕ ಭವನವನ್ನು ಮರೆತಿದ್ದಾರೆ ಎಂದು ಆರೋಪಿಸಿದರು.

ನಡೆದಾಡುವ ದೇವರು ಎನಿಸಿಕೊಂಡಿರುವ ಪರಮ ಪೂಜ್ಯ ಪಂಡಿತ ಪುಟ್ಟರಾಜರ ಹೆಸರನ್ನು ಸ್ಮಾರಕ ಭವನಕ್ಕೆ ಇಟ್ಟು ಅವಮಾನ ಮಾಡುತ್ತಿದ್ದಾರೆ.

ಈಗಾಗಲೇ 5 ಕೋಟಿ ರೂ ವೆಚ್ಚದಲ್ಲಿ ಅರ್ಧ ಕಾಮಗಾರಿ ಮುಗಿದು ಹಲವು ವರ್ಷಗಳೇ ಕಳೆದಿವೆ. ಹೀಗೆ ಮುಂದುವರಿದರೆ ಆ ಕಟ್ಟಡ ಬೀಳುವ ಸಾಧ್ಯತೆ ಇದೆ. ಕೂಡಲೇ ಸರ್ಕಾರ ಹಾಗೂ ಜಿಲ್ಲಾಡಳಿತ ಎಚ್ಚೆತ್ತು ಹಣ ಬಿಡುಗಡೆಗೊಳಿಸಿ ಕಾಮಗಾರಿ ಪೂರ್ಣಗೊಳಿಸಬೇಕು ಎಂದು ಆಗ್ರಹಿಸಿದರು.

ರಾಜ್ಯದಲ್ಲಿ ಬಾಣಂತಿಯರ ಸಾವು ನಿರಂತರವಾಗಿ ನಡೆ-ಯುತ್ತಿದೆ. ಸಾವಿಗೂ ಮುನ್ನ ಸರ್ಕಾರ ಎಚ್ಚೆತ್ತುಕೊಳ್ಳಬೇಕು. ಸಾವಿನ ಬಗ್ಗೆ ಸಮಗ್ರ ತನಿಖೆ ಆಗಬೇಕು.

ಮಹಿಳೆಯರು ಹಾಗೂ ನವಜಾತ ಶಿಶುಗಳ ಜೀವದ ಜೊತೆ ರಾಜ್ಯ ಸರ್ಕಾರ ಆಟ ಆಡುತ್ತಿದೆ. ಸತ್ತ ನಂತರ ಪರಿಹಾರ ನೀಡುವ ಮುನ್ನ ಬದುಕಿದ್ದಾಗ ಜೀವ ಉಳಿಸುವ ಕೆಲಸ ಮಾಡಬೇಕು ಎಂದು ರಾಜ್ಯ ಸರ್ಕಾರದ ನಿರ್ಲಕ್ಷ್ಯದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು.

ನೀರಿನ ಸಮಸ್ಯೆಗೆ ಜಿಲ್ಲಾ ಉಸ್ತುವಾರಿ ಸಚಿವರೇ ಕಾರಣ ಎಂದು ಆರೋಪಿಸಿದ ಅವರು, ಬೇಸಿಗೆಗೂ ಮುನ್ನವೇ ಅವಳಿ ನಗರದಲ್ಲಿ ನೀರಿಗಾಗಿ ಹಾಹಾಕಾರ ಎದ್ದಿದೆ. ಸಚಿವ ಎಚ್.ಕೆ. ಪಾಟೀಲರ ನಿರ್ಲಕ್ಷ್ಯದಿಂದ ಜನತೆ ತೊಂದ-ರೆ ಅನುಭವಿಸುತ್ತಿದ್ದಾರೆ. 24*7 ಯೋಜನೆ ಜಾರಿಗೆ ತಂದು 24 ದಿನಗಳಿಗೊಮ್ಮೆ ನೀರು ಪೂರೈಸುತ್ತಿದ್ದಾರೆ ಎಂದರು.

## ಸಂಪಾದಕೀಯ

# ಮಾತಿನ ಕಲೆಗೆ ಮರುಳಾಗದಿರಿ

ಊಟ ಬಲ್ಲವನಿಗೆ ರೋಗವಿಲ್ಲ, ಮಾತು ಬಲ್ಲವನಿಗೆ ಜಗಳವಿಲ್ಲ ಎನ್ನುವ ಗಾದೆ ಮಾತು ಅವೆಲ್ಲ ಕೇಳಿದ್ದೇವೆ. ಅದೇ ರೀತಿ ಹಣ ಮತ್ತು ಸೊಗಸಾದ ಮಾತುಗಾರಿಕೆ ಇದ್ದರೆ ರಾಜಕಾರಣದಲ್ಲಿ ಅಧಿಕಾರವು ನಿಶ್ಚಿತ ಎನ್ನುವುದು ಆಧುನಿಕ ಗಾದೆ.

ರಾಜಕಾರಣಿಗಳು ಎಂದರೆ ಸೊಗಸಾದ ಮಾತುಗಾರಿಕೆ ಕಲೆ ಅವರಲ್ಲಿ ಇರಲೇಬೇಕು. ಮಾತಿನಿಂದ ಜನರನ್ನ ಮರಳು ಮಾಡಿ, ಮಾತಿನಲ್ಲಿ ಮನೆ ಕಟ್ಟಿ ಜನರಿಗೆ ಮನೆ ಸಿಗದಂತೆ ಮಾಡುವ ಬುದ್ಧಿವಂತಿಕೆ ಇರಬೇಕು.

ವಿಶೇಷ ಎಂದರೆ ಈ ಎಲ್ಲ ಗುಣಗಳು ಭಾರತದ ರಾಜಕಾರಣಿಗಳಲ್ಲಿ ಇದೆ. ದೇಶದ ಖ್ಯಾತ ರಾಜಕಾರಣಿಗಳ ಪಟ್ಟಿ ಗಮನಿಸಿದಲ್ಲಿ ಪ್ರತಿಯೊಬ್ಬರು ಸೊಗಸಾದ ಮಾತುಗಾರರೇ. ಕೆಲವರು ಜನಪರ ಹೋರಾಟದ ಮೂಲಕ ರಾಜಕಾರಣಕ್ಕೆ ಬಂದು ಜನಸೇವೆಯ ಧ್ಯೇಯ ಇಟ್ಟುಕೊಂಡು, ಮೊನಚಾದ ಮಾತುಗಳ ಮೂಲಕ ಜನರನ್ನ ಸೆಳೆಯುತ್ತಾರೆ. ಇನ್ನು ಕೆಲವರು ಅಪಾರ ಓದಿನ ಮೂಲಕ ಸಂಪಾದಿಸಿದ ಪಾಂಡಿತ್ಯವನ್ನು ಬಳಸಿಕೊಂಡು ತಮ್ಮ ಚಿಂತನೆಯನ್ನು ಹರಿಬಿಡುತ್ತಾರೆ.

ಇನ್ನು ಕೆಲವರು ಅಂತಹ ಚಿಂತಕರನ್ನ ಕೆಲಸಕ್ಕೆ ಇಟ್ಟುಕೊಂಡು ಟೆಲಿ ಪ್ರಾಂಪ್ಟರ್ ಬಳಸಿ ಮಾತನಾಡುತ್ತಾರೆ. ಅವರ ಮಾತುಗಳು ಜನಪರ ಹೋರಾಟದ ಮೂಲಕ ಬಂದ ರಾಜಕಾರಣಿಗಳಿಗಿಂತ ಆಕರ್ಷಕವಾಗಿರುತ್ತದೆ. ಜೊತೆಗೆ ಧ್ವನಿಯ ಏರಳಿತದ ತಂತ್ರಗಾರಿಕೆ, ತಂತ್ರಜ್ಞಾನ ಗೊತ್ತಿದ್ದರಂತೂ ಜನ ಅವರ ಮಾತುಗಳನ್ನು ಮುಗಿಬಿದ್ದು ಕೇಳುತ್ತಾರೆ.

ಸದ್ಯ ನಮ್ಮ ಪ್ರಧಾನಿ ನರೇಂದ್ರ ಮೋದಿ ಅಂತಹದ್ದೇ ತಂತ್ರಗಾರಿಕೆ, ತಂತ್ರಜ್ಞಾನ ಬಳಸಿಕೊಂಡು ಜನರನ್ನ ಮಂತ್ರಮುಗ್ಧಗೊಳಿಸುತ್ತಿದ್ದಾರೆ. ಮೊನ್ನೆ ನಡೆದ ದೆಹಲಿ ವಿಧಾನಸಭೆ ಚುನಾವಣೆ ಪ್ರಚಾರ ಭಾಷಣದಲ್ಲಿ, ತಂತ್ರಜ್ಞಾನ ಕೈ ಕೊಟ್ಟು ಮಾತುಗಳು ಹೊರಡದಂತಹ ಸ್ಥಿತಿ ನಿರ್ಮಾಣವಾಗಿತ್ತು. ಕೆಲ ನಿಮಿಷಗಳ ನಂತರ ಸುಧಾರಿಸಿಕೊಂಡು ತಮ್ಮ ಮಾತುಗಳನ್ನ ನಿರರ್ಗಳವಾಗಿ ಆಡಿದ್ದಾರೆ. ಹೀಗೆ ನರೇಂದ್ರ ಮೋದಿ 2014 ರಿಂದ ನಿರಂತರವಾಗಿ ತಂತ್ರಜ್ಞಾನ ಬಳಸಿಕೊಂಡೆ ಮಾತಾಡಿದ್ದಾರೆ. ಆ ಮೂಲಕ ದೇಶದ ಜನರನ್ನ ತಮ್ಮ ಮಾತುಗಳಿಂದಲೇ ಹಿಡಿದಿಟ್ಟಿದ್ದಾರೆ. ಆದರೆ ಅಂತಹ ಮಾತುಗಳನ್ನು ನಂಬಿ ಜನ ನಿರ್ಣಯ ತೆಗೆದುಕೊಳ್ಳಬಾರದು. ಅದರಲ್ಲೂ ದೆಹಲಿಯಲ್ಲಿ ಆಮ್ ಆದ್ಮಿ ಪಾರ್ಟಿ ಸರ್ಕಾರ ಬಂದಾಗಿನಿಂದ ದೆಹಲಿ ಸಾಕಷ್ಟು ಬದಲಾವಣೆ ಆಗಿದೆ.ಕೇಜ್ರಿವಾಲ್ ನೇತೃತ್ವದ ಸರ್ಕಾರ ಎಲ್ಲ ರೀತಿಯಿಂದಲೂ ಒಳ್ಳೆಯದನ್ನೇ ಮಾಡಿದೆ ಎನ್ನಲು ಸಾಧ್ಯವಿಲ್ಲ. ಆದರೆ ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರದಲ್ಲಿ ಆಮ್ ಆದ್ಮಿ ಸರ್ಕಾರ ಉತ್ತಮ ಕೆಲಸಗಳನ್ನು ಮಾಡಿದೆ. ಅದಾಗಿಯೂ ನರೇಂದ್ರ ಮೋದಿ ದೆಹಲಿಯಲ್ಲಿ ಯಾವುದೇ ಅಭಿವೃದ್ಧಿ ಆಗಿಲ್ಲ ಎನ್ನುವ ಮಾತುಗಳನ್ನ ಆಡಿದ್ದಾರೆ. ತಂತ್ರಜ್ಞಾನ ಬಳಸಿ ಆಡಿದ ಮಾತಿಗೆ ಜನ ಮರಳಾಗದೆ, ವಿವೇಚನ ಬಳಸಿ ಮತ ನೀಡಬೇಕು. ವಿವೇಚನೆ ಬಳಸಿಯೇ ಅಧಿಕಾರ ಕೊಡಬೇಕು.

### ಸಾರಿಗೆ ಸಂಸ್ಥೆಯ ನೌಕರರಿಗಾಗಿ 'ಸಾರಿಗೆ ಆಶಾಕಿರಣ' ನೇತ್ರ ತಪಾಸಣಾ ಯೋಜನೆಯ ಉದ್ಘಾಟನೆ

# ನೌಕರರಿಗೆ ಅಪಘಾತ ಪರಿಹಾರ ವಿಮೆ ಜಾರಿ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ವಾ.ಕ.ರ.ಸಾ ಸಂಸ್ಥೆಯ ನಗರ ಸಾರಿಗೆ ಘಟಕ ಹುಬ್ಬಳ್ಳಿಯಲ್ಲಿ ಸೋಮವಾರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಸಮಾರಂಭದ ಉದ್ಘಾಟನೆ ಹಾಗೂ ಎಸ್‌ಬಿಐ ಬ್ಯಾಂಕ್‌ನಿಂದ ಒಂದು ಕೋಟಿ ಪರಿಹಾರ ವಿಮೆ ಜಾರಿ ಯೋಜನೆಯನ್ನು ಸಂಸ್ಥೆಯ ಅಧ್ಯಕ್ಷರು ಹಾಗೂ ಕಾಗವಾಡ ಶಾಸಕರಾದ ಭರಮಗೌಡ (ರಾಜು) ಅ.ಕಾಗೆ ಅವರು ನೆರವೇರಿಸಿ ಮಾತನಾಡಿ, ಎಸ್‌ಬಿಐ ಬ್ಯಾಂಕ್‌ನಿಂದ ಒಂದು ಕೋಟಿ ಅಪಘಾತ ಪರಿಹಾರ ವಿಮೆ ಜಾರಿಯಾಗಿದೆ. ಹೆಚ್ಚು ಶ್ರಮ ಪಡುವ ಸಾರಿಗೆ ನೌಕರರು ಅನಿರೀಕ್ಷಿತವಾಗಿ ನಿಧನರಾದಲ್ಲಿ, ಅವರುಗಳ ಅವಲಂಬಿತರು ಆರ್ಥಿಕವಾಗಿ ಸಂಕಷ್ಟಕ್ಕೆ ಒಳಗಾಗಬಾರದು ಎಂಬ ಸದುದ್ದೇಶದಿಂದ ಮತ್ತು ನೌಕರರ ಅವಲಂಬಿತರನ್ನು ಆರ್ಥಿಕವಾಗಿ ಸಬಲರನ್ನಾಗಿಸಲು ಈ ಯೋಜನೆಯನ್ನು ತರಲಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಸಂಸ್ಥೆಯಲ್ಲಿ ಕರ್ತವ್ಯದಲ್ಲಿದ್ದಾಗ ಮೃತಪಟ್ಟ ಸಿಬ್ಬಂದಿಗಳ ಅವಲಂಬಿತರಿಗೆ ಕುಟುಂಬ ಕಲ್ಯಾಣ ನಿಧಿ ಹಾಗೂ ಅಪಘಾತ ಪರಿಹಾರ ನಿಧಿ ಚೆಕ್‌ಗಳನ್ನು ವಿತರಿಸಿದರು.

ರೀಜನಲ್ ಮ್ಯಾನೇಜರ್ ಡಾ. ಮೋಹನ ಪಾಟೀಲ ಮಾತನಾಡಿ, ಎಸ್‌ಬಿಐ ಬ್ಯಾಂಕಿನ ಈ ಯೋಜನೆಯ ಮೂಲಕ ಸಂಸ್ಥೆಯ ನೌಕರರಿಗೆ ನೀಡುವ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು. ಡಾ. ನಿರಂಜನ್ ಜೋಶಿ, ಎಂ.ಎಂ.ಜೋಶಿ ಕಣ್ಣಿನ ಆಸ್ಪತ್ರೆ ನಿರ್ದೇಶಕ ಡಾ. ಎಸ್.ಎಂ. ಜೋಶಿ ಮಾತನಾಡಿದರು.



ಸಮಾರಂಭದಲ್ಲಿ ಇಲಾಖಾ ಮುಖ್ಯಸ್ಥರಾದ ವಿಜಯಶ್ರೀ ನರಗುಂದ, ಗಣೇಶ ರಾಠೋಡ, ಬಿ.ಬೋರಯ್ಯ, ಜಗದಂಬಾ ಕೋಪರ್ಡೆ, ಜಿ.ಶ್ರೀನಾಥ, ಅಧಿಕಾರಿಗಳಾದ ಎಂ.ಬಿ. ಕಪಲಿ, ರವಿ ಅಂಚಿಗಾವಿ, ಪಿ.ಆರ್. ಕಿರಣಗಿ, ಶಿವಾನಂದ ನಾಗಾವಿ, ವಿಭಾಗೀಯ ನಿಯಂತ್ರಣಾಧಿಕಾರಿ ಎಂ.ಸಿದ್ದಲಿಂಗೇಶ, ಎಚ್.ರಾಮನಗೌಡರ, ಕಾರ್ಮಿಕ ಮುಖಂಡರುಗಳಾದ ಆರ್.ಎಫ್. ಕವಳಿಕಾಯಿ, ಗಂಗಾಧರ ಕಮಲದಿನ್ನಿ ಮತ್ತು ಸಂಸ್ಥೆಯ ಇನ್ನಿತರ ಅಧಿಕಾರಿ/ಸಿಬ್ಬಂದಿಗಳು ಉಪಸ್ಥಿತರಿದ್ದರು.

ಮುಖ್ಯ ಕಾರ್ಮಿಕ ಮತ್ತು ಕಲ್ಯಾಣಾಧಿಕಾರಿ ಪಿ.ವೈ. ನಾಯಕ ಸ್ವಾಗತಿಸಿದರು. ಸುನಿಲ ಪತ್ರಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕಿ ಪ್ರಿಯಾಂಗಾ ಮಾತನಾಡಿ, 2025ರಲ್ಲಿ ಸಂಸ್ಥೆಯ ನೌಕರರ ಅನುಕೂಲಕ್ಕಾಗಿ ಹಲವು ಯೋಜನೆಗಳನ್ನು ಜಾರಿಗೊಳಿಸಲಾಗುತ್ತಿದೆ. ಅದರಲ್ಲಿ ಮೊದಲನೆಯದಾಗಿ ಎಸ್‌ಬಿಐ ಬ್ಯಾಂಕಿನಿಂದ ಒಂದು ಕೋಟಿ ಅಪಘಾತ ಪರಿಹಾರ ವಿಮೆ ಜಾರಿಯಾಗಿದೆ. ಸಂಸ್ಥೆಯ ನೌಕರರ ಅನುಕೂಲಕ್ಕಾಗಿ ತಮ್ಮ ಸಮಸ್ಯೆಗಳ ಕುರಿತು ಕಛೇರಿಗೆ ಅಲೆದಾಡುವುದನ್ನು ತಪ್ಪಿಸುವ ಸಲುವಾಗಿ ವಾಯವ್ಯ ಸ್ನೇಹಿ ಆ್ಯಪ್‌ನ್ನು ಅಭಿವೃದ್ಧಿಪಡಿಸಿದ್ದು, ಇದರಲ್ಲಿ ಸಿಬ್ಬಂದಿಗಳು ಪಿಎಫ್ ಮಾಹಿತಿ ಇ-ಅರ್ಜಿ ಸಲ್ಲಿಕೆ, ಸಾರಿಗೆ ಸ್ಪಂದನದಡಿ ದೂರು/ಮನವಿ ಸಲ್ಲಿಕೆ ಮುಂತಾದ ಸೌಲಭ್ಯಗಳಿದ್ದು, ಸದುಪಯೋಗಪಡಿಸಿಕೊಳ್ಳುವಂತೆ ತಿಳಿಸಿದರು.

# ವಿಜ್ರಂಭಣೆಯಿಂದ ಜರುಗಿದ ಅಯ್ಯಪ್ಪ ಸ್ವಾಮಿ ಮಹಾಪೂಜೆ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಸನ್ನಿಧಾನದ ಸೇವಾ ಸಮಿತಿ ವತಿಯಿಂದ 30ನೇ ಅಯ್ಯಪ್ಪ ಸ್ವಾಮಿಯ ಮಹಾಪೂಜೆಯನ್ನು ಜನವರಿ 6 ಸೋಮವಾರದಂದು ಸಾವಿರಾರು ಭಕ್ತ ಸಮೂಹದ ಮಧ್ಯೆ ವಿಜೃಂಭಣೆಯಿಂದ ಜರಗಿತು. ಮಹಾಪೂಜೆಯ ಅಂಗವಾಗಿ ಮಧ್ಯಾಹ್ನ ಅನ್ನ ಸಂತರ್ಪಣೆ ಹಾಗೂ ಸಾಯಂಕಾಲ ಸನ್ನಿಧಾನದ ಹಿರಿಯ ಗುರುಸ್ವಾಮಿಗಳಾದ



ವಿರೂಪಾಕ್ಷ ಪೊಲೀಸ್ ಪಾಟೀಲ ನೇತೃತ್ವದಲ್ಲಿ ಅಯ್ಯಪ್ಪ ಸ್ವಾಮಿಗೆ ಪಂಚಾಮೃತ ಅಭಿಷೇಕ 18 ಕುಂಬಗಳಿಗೆ ಕುಂಬ ಪೂಜೆ ಅಯ್ಯಪ್ಪ ಸ್ವಾಮಿಯ ಭಜನೆ, ನಡೆಯಿತು.

ಈ ಸಂದರ್ಭದಲ್ಲಿ ಮಾತನಾಡಿದ ನಾಗರಾಜ ಬಾಗಲಕೋಟ ಗುರುಸ್ವಾಮಿಗಳು, ಮಣಿಕಂಠ ಸನ್ನಿಧಾನದಲ್ಲಿ ಪ್ರತಿ ಶನಿವಾರ ಅಯ್ಯಪ್ಪ ಸ್ವಾಮಿಗೆ ಪೂಜೆ ಅಭಿಷೇಕ ಹಾಗೂ ಅನ್ನ ಪ್ರಸಾದದ ಜೊತೆಗೆ ಸತ್ಸಂಗ ಕಾರ್ಯಕ್ರಮ ಇರುತ್ತದೆ. ಕಾರಣ ಎಲ್ಲ ಅಯ್ಯಪ್ಪ ಭಕ್ತರು ಪ್ರತಿ ಶನಿವಾರ ಆಗಮಿಸಿ ಸ್ವಾಮಿಯ ಆಶೀರ್ವಾದ ಪಡೆಯಬೇಕು ಎಂದು ಹೇಳಿದರು.

ಸಂಧರ್ಭದಲ್ಲಿ ಆನಂದ ಕಂಬಳಿ ಗುರುಸ್ವಾಮಿಗಳು, ಶಿವಾನಂದ ಗುರುಸ್ವಾಮಿಗಳು ಸೇರಿದಂತೆ ನೂರಾರು ಅಯ್ಯಪ್ಪ ಮಾಲಾಧಾರಿ ಸ್ವಾಮಿಗಳು ಹಾಗೂ ಅಯ್ಯಪ್ಪ ಭಕ್ತರು ಉಪಸ್ಥಿತರಿದ್ದರ.

### ಆರ್ಝೂದ್ ಬ್ಯಾಂಕ್‌ನ ಗ್ರಾಹಕರ ಸಂಪರ್ಕ ಸಭೆ, ದಿನದರ್ಶಿಕ ಬಿಡುಗಡೆ

# ಸಹಕಾರಿ ಬ್ಯಾಂಕುಗಳು ಜನತೆಗೆ ಉಪಯುಕ್ತವಾಗಿವೆ

■ವಿಜಯಸಾಕ್ಷಿ ಸುದ್ದಿ, ಗದಗ

ಸಾರ್ವಜನಿಕರ ಆರೋಗ್ಯ ಕಾಪಾಡುವಲ್ಲಿ ಸಹಕಾರಿ ಬ್ಯಾಂಕುಗಳು ಪರಿಣಾಮಕಾರಿ ಕಾರ್ಯ ಮಾಡುತ್ತಿವೆ ಎಂದು ತಜ್ಞ ವೈದ್ಯ ಡಾ. ಪ್ರಕಾಶ ಸಂಕನೂರ ಹೇಳಿದರು.

ಅವರು ಗದುಗಿನ ದಿ. ಆರ್ಝೂದ್ ಕೋ-ಆಪ್ ಬ್ಯಾಂಕ್ ಸಭಾಂಗಣದಲ್ಲಿ ಏರ್ಪಡಿಸಿದ್ದ ಗ್ರಾಹಕರ ಸಂಪರ್ಕ ಸಭೆಯಲ್ಲಿ ನೂತನ ವರ್ಷದ ದಿನದರ್ಶಿಕೆಯನ್ನು ಬಿಡುಗಡೆಗೊಳಿಸಿ ಮಾತನಾಡಿದರು.

ಸಣ್ಣ ಮತ್ತು ಮಧ್ಯಮ ವರ್ಗದ ಜನತೆಗೆ ಸಹಕಾರಿ ಸಂಘಗಳು, ಸಹಕಾರಿ ಬ್ಯಾಂಕುಗಳು ಬಹಳಷ್ಟು ಉಪಯುಕ್ತವಾಗಿವೆ. ತಕ್ಷಣ ಸಾಲ ಸೌಲಭ್ಯ ಸಿಗುವ ಜೊತೆಗೆ, ಸಹಕಾರ ಸೌಹಾರ್ದತೆ



ದ್ವಿಗುಣಗೊಳ್ಳುವದು ಎಂದರು.

ಗದಗ ಪರಿಸರದಲ್ಲಿ ಆರ್ಝೂದ್ ಬ್ಯಾಂಕ್ ಬಹು ವರ್ಷಗಳಿಂದ ಈ ಭಾಗದ ಜನತೆಗೆ ಉತ್ತಮ ಸೇವೆ ಒದಗಿಸುವ ಮೂಲಕ ಬಡ ಮತ್ತು ಮಧ್ಯಮ ವರ್ಗದ ಆರ್ಥಿಕ ಸ್ಥಿತಿ ಸುಧಾರಿಸುವಲ್ಲಿ ಉತ್ತಮ ಕಾರ್ಯ ಮಾಡುತ್ತಿದೆ. ಬ್ಯಾಂಕ್ ಇನ್ನೂ ಹೆಚ್ಚಿನ ರೀತಿಯಲ್ಲಿ ಸೇವೆ ನೀಡುತ್ತ ಪ್ರಗತಿ ಹೊಂದಲಿ ಎಂದು ಶುಭ ಕೋರಿದರು.

ಅತಿಥಿಯಾಗಿ ಆಗಮಿಸಿದ್ದ ಗದಗ ಐಎಂಎ ಮಾಜಿ ಅಧ್ಯಕ್ಷ ಡಾ. ಪ್ಯಾರ್‌ಅಲಿ ನೂರಾನಿ ಮಾತನಾಡಿ, ಇತ್ತೀಚಿನ ವರ್ಷಗಳಲ್ಲಿ ಬ್ಯಾಂಕು ಪ್ರಗತಿಪಥದಲ್ಲಿ ಮುನ್ನಡೆದಿದ್ದು, ಗ್ರಾಹಕರಿಗೆ ಉತ್ತಮ ಸೇವೆ ನೀಡುತ್ತಿದೆ ಎಂದರು. ಬ್ಯಾಂಕ್‌ನ ಗ್ರಾಹಕರಾದ ಪ್ರೊ. ಎಂ.ಎಲ್. ಗುಳೇದಗುಡ್ಡ, ಅಬ್ದುಲ್ ಮುಲ್ಲಾ ಬ್ಯಾಂಕ್ ಪ್ರಗತಿಗೆ ಸಲಹೆ-ಸೂಚನೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಬ್ಯಾಂಕ್‌ನ ಚೇರಮನ್ ಸರಫರಾಜಅಹ್ಮದ್ ಎಸ್.ಉಮಚಗಿ ಮಾತನಾಡಿದರು. ವೇದಿಕೆಯ ಮೇಲೆ ಬ್ಯಾಂಕ್‌ನ ನಿರ್ದೇಶಕರು ಉಪಸ್ಥಿತರಿದ್ದರು. ಎಂ.ಎಚ್. ಜಮಾಲಸಾಬನವರ ಕುರಾನ್ ಪಠಿಸಿದರು. ವ್ಯವಸ್ಥಾಪಕ ನಿರ್ದೇಶಕ ಎ.ಜಿ. ಯರಗುಡಿ ಸ್ವಾಗತಿಸಿದರು. ಪ್ರಾ. ಮಸ್ತಾನಅಲಿ ಶಿರಹಟ್ಟಿ ನಿರೂಪಿಸಿದರು. ಶಾಖಾ ವ್ಯವಸ್ಥಾಪಕ ಆರ್.ಎಂ. ನದಾಫ್ ವಂದಿಸಿದರು.

# ಸಿಐಟಿಯು ವತಿಯಿಂದ ಜ.8ರಂದು ಗಜೇಂದ್ರಗಡ ಬಂದ್ ಕರೆ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಗಜೇಂದ್ರಗಡದ ಪುರಸಭೆ ಬೀದಿ ಬದಿ ವ್ಯಾಪಾರಸ್ಥರನ್ನು ಪ್ರಭಾವಿ ರಾಜಕಾರಣಿಗಳ ಹಿತಾಸಕ್ತಿಗೆ ಮಣಿದು ಏಕಾಏಕಿ ನಗರದ ಜೋಡು ರಸ್ತೆಯಿಂದ ಒಕ್ಕಲೆಬ್ಬಿಸಿ ನ್ಯಾಯಾಲಯದದಲ್ಲಿ ಚಾಲ್ತಿಯಿರುವ ಪ್ರಕರಣದ ಅನಧಿಕೃತವಾದ ಬಯಲು ಜಾಗೆಗೆ ಸ್ಥಳಾಚಿತರಿಸಿರುವುದನ್ನು ವಿರೋಧಿಸಿ ಸೆಂಟರ್ ಆಫ್ ಟ್ರೇಡ್ ಯೂನಿಯನ್(ಸಿಐಟಿಯು) ಕಾರ್ಮಿಕ ಸಂಘಟನೆ ನೇತೃತ್ವದಲ್ಲಿ ನಗರದ ಬೀದಿ ಬದಿ ವ್ಯಾಪಾರಸ್ಥರು ಜ. 8ರಂದು ಗಜೇಂದ್ರಗಡ ಬಂದ್‌ಗೆ ಕರೆ ನೀಡಿವೆ.



ಪುರಸಭೆ ಅಧಿಕಾರಿಗಳು ಪ್ರಭಾವಿ ರಾಜಕಾರಣಿಗಳ ಕೈಗೊಂಬೆ ಗಳಂತೆ ವರ್ತಿಸುತ್ತಿದ್ದು, ಅವರಿಗೆ ಕಾಯ್ದೆ - ಕಾನೂನುಗಳನ್ನು, ನಿಯಮಗಳನ್ನು ಪಾಲಿಸುವ ಯಾವುದೇ ಇಚ್ಛಾಶಕ್ತಿ ಇಲ್ಲವಾಗಿದೆ. ಬೀದಿ ಬದಿ ವ್ಯಾಪಾರಸ್ಥರ ಕಾಯ್ದೆ ಪಾಲನೆಯ ಅರಿವು ಇದ್ದರೂ ಜಾಣ ಕುರುಡರಂತೆ ವರ್ತಿಸುತ್ತಿದ್ದಾರೆ. ಇದುವರೆಗೂ ಸಂಬಂಧಿಸಿದ ಜನಪ್ರತಿನಿಧಿಗಳು ಹಾಗೂ ವ್ಯವಸ್ಥೆಯಿಂದ ಸೂಕ್ತ ಸ್ಪಂದನೆ ದೊರೆಯದ ಕಾರಣ ಈ ಹೋರಾಟವನ್ನು ತೀವ್ರಗೊಳಿಸುವ ಅನಿವಾರ್ಯತೆ ಎದುರಾಗಿದೆ.

ಈ ಗಾಲಾದರೂ ಬಡಪಾಯಿ ಬೀದಿ ಬದಿ ವ್ಯಾಪಾರಸ್ಥರ ಹಿತ ಕಾಯಲು ಮುಂದಾಗಬೇಕು ಎಂದು ಸಂಘಟನೆ ಆಗ್ರಹಿಸಿದೆ.

# ಚಿಕ್ಕಹಂದಿಗೋಳ ಗ್ರಾಮದಲ್ಲಿ ರಕ್ತದಾನ ಶಿಬಿರ, ವೀರಯೋಧರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ತಾಲೂಕಿನ ಚಿಕ್ಕಹಂದಿಗೋಳ ಗ್ರಾಮದಲ್ಲಿ ಶ್ರೀ ಬಸವಲಿಂಗಯ್ಯ ಬಸಯ್ಯ ಗುಡ್ಡಿಮಠ ಅವರ 68ನೇ ವರ್ಷದ ಹುಟ್ಟುಹಬ್ಬದ ಅಂಗವಾಗಿ ಶಿವಬಸವ ಟ್ರಸ್ಟ್ ಕಮಿಟಿಯ ನೇತೃತ್ವದಲ್ಲಿ

ರಕ್ತದಾನ ಶಿಬಿರ, ಉಚಿತ ಆರೋಗ್ಯ ತಪಾಸಣೆ ಮತ್ತು ರೈತರಿಗೆ ಹಾಗೂ ವೀರ ಯೋಧರಿಗೆ" ಸನ್ಮಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯವನ್ನು ಗ್ರಾಮ ಪಂಚಾಯತಿ ಹಿರಿಯ ಸದಸ್ಯ ಶ್ರೀನಿವಾಸ ದ್ಯಾವನೂರು ಉದ್ಘಾಟಿಸಿದರು. ಹೊಸಹಳ್ಳಿಯ ಅಭಿನವ ಬೂದೀಶ್ವರ ಮಹಾಸ್ವಾಮಿಗಳು ಸಾನಿಧ್ಯ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತಿ ಸದಸ್ಯರಾದ ರವಿ ಮೆಟಗುಡ್ಡ ಸೇರಿದಂತೆ ಅಧ್ಯಕ್ಷ, ಉಪಾಧ್ಯಕ್ಷ, ಸರ್ವ ಸದಸ್ಯರು, ಆಶಾ ಕಾರ್ಯಕರ್ತೆಯರು, ವಿವಿಧ ಯುವಕ ಮಂಡಳದ ಸದಸ್ಯರು ಪಾಲ್ಗೊಂಡಿದ್ದರು.

ರಕ್ತದಾನ ಶಿಬಿರವನ್ನು ಜಿಮ್ಸ್ ಆಸ್ಪತ್ರೆಯ ವೈದ್ಯಾಧಿಕಾರಿಗಳು ನಡೆಸಿಕೊಟ್ಟರು. ಗ್ರಾಮದ ಹಲವರು ರಕ್ತದಾನ ಮಾಡುವ ಮೂಲಕ ಗಮನ ಸೆಳೆದರು.

ಆರೋಗ್ಯ ಶಿಬಿರವನ್ನು ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ವೈದ್ಯಾಧಿಕಾರಿಗಳಿಂದ ಸಾರ್ವಜನಿಕರಿಗೆ ತಪಾಸಣೆಯನ್ನು ನಡೆಸಲಾಯಿತು ಹಲವಾರು ಯುವಕ ಮಿತ್ರರು "ರಕ್ತದಾನವನ್ನು ಮಾಡುವ ಮೂಲಕ ಗಮನ ಸೆಳೆದರು..

# ಬೆಳೆಗಳ ವಿವರ ಬೆಳೆ ಸಮೀಕ್ಷೆ ಆ್ಯಪ್‌ನಲ್ಲಿ ದಾಖಲಿಸುವುದು ಕಡ್ಡಾಯ

■ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನ ಹಿಂಗಾರು ಹಂಗಾಮಿನ ಬೆಳೆ ಸಮೀಕ್ಷೆ ಈಗಾಗಲೇ ಪ್ರಾರಂಭವಾಗಿದ್ದು, ರೈತರು ತಾವು ಬೆಳೆದ ಬೆಳೆಗಳ ವಿವರಗಳನ್ನು ತಾವೇ ಖುದ್ದಾಗಿ ಗೂಗಲ್ ಪ್ಲೇಸ್ಟೋರ್‌ನಿಂದ "ಹಿಂಗಾರು ರೈತರ ಬೆಳೆ ಸಮೀಕ್ಷೆ 2024" ನ್ನು ಡೌನ್‌ಲೋಡ್ ಮಾಡಿಕೊಂಡು ಬೆಳೆ ವಿವರಗಳನ್ನು ದಾಖಲಿಸಬೇಕಾಗಿದೆ. ಹೀಗೆ ವಿವರಗಳನ್ನು ದಾಖಲಿಸುವದರಿಂದ ರೈತರಿಗೆ ಕನಿಷ್ಠ ಬೆಂಬಲ ಬೆಲೆ ಯೋಜನೆ, ಬೆಳೆ ವಿಮೆ ಯೋಜನೆ, ಬರಗಾಲ ಮತ್ತು ಪ್ರವಾಹ ಸಂದರ್ಭದಲ್ಲಿ ನಷ್ಟ ಪರಿಹಾರ ಪಡೆಯಲು, ಪಹಣಿಯಲ್ಲಿ ಬೆಳೆ ವಿವರಗಳನ್ನು ದಾಖಲಿಸಲು ಮತ್ತು ಬೆಳೆಸಾಲ ಪಡೆಯುವಲ್ಲಿ ರೈತರಿಗೆ ಅನುಕೂಲವಾಗುವದರಿಂದ ಎಲ್ಲ ರೈತರು ಬೆಳೆ ವಿವರಗಳನ್ನು ತ್ವರಿತವಾಗಿ ಬೆಳೆ ಸಮೀಕ್ಷೆ ಆ್ಯಪ್‌ನಲ್ಲಿ ದಾಖಲಿಸಿ ಇದರ ಸದುಪಯೋಗ ಪಡೆದುಕೊಳ್ಳಬೇಕಿದೆ. ರೈತರು ಬೆಳೆ ವಿವರಗಳನ್ನು ಅಪ್‌ಲೋಡ್ ಮಾಡದಿದ್ದಲ್ಲಿ ಮೇಲೆ ತಿಳಿಸಿದ ಸರ್ಕಾರದ ಯೋಜನೆಗಳ ಲಾಭದಿಂದ ವಂಚಿತರಾಗುವ ಸಾಧ್ಯತೆ ಇರುವುದರಿಂದ ರೈತರು ಇದನ್ನು ಗಂಭೀರವಾಗಿ ಪರಿಗಣಿಸಿ ತುರ್ತಾಗಿ ವಿವರಗಳನ್ನು ದಾಖಲಿಸಬೇಕು ಎಂದು ಗದಗ ಸಹಾಯಕ ಕೃಷಿ ನಿರ್ದೇಶಕ ಮಲ್ಲಯ್ಯ ಕೊರವನವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ರೈತರು ತಮ್ಮ ಗ್ರಾಮದ ಖಾಸಗಿ ನಿವಾಸಿಗಳು, ಕಂದಾಯ/ಕೃಷಿ/ತೋಟಗಾರಿಕೆ/ರೇಷ್ಮೆ ಇಲಾಖೆಗಳ ಅಧಿಕಾರಿಗಳನ್ನು ಸಂಪರ್ಕಿಸಬಹುದು ಹಾಗೂ 18004253553 ಗೆ ಕರೆ ಮಾಡಬಹುದಾಗಿದೆ.

### ಪಿಎಸ್‌ಬಿಡಿ ಬಾಲಕಿಯರ ಪ್ರೌಢಶಾಲೆಯಲ್ಲಿ ವಿದ್ಯಾರ್ಥಿನಿಯರಿಂದ ತಾಯಂದಿರಿಗೆ ಪಾದಪೂಜೆ

# ತಂದೆ-ತಾಯಿಯರ ಋಣ ತೀರಿಸಲಾಗದು



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮನೆಯೇ ಮೊದಲ ಪಾಠಶಾಲೆ, ತಾಯಿಯೇ ಮೊದಲ ಗುರು ಎನ್ನುವ ಮಾತು ಸೂರ್ಯ-ಚಂದ್ರರಷ್ಟೇ ಸತ್ಯ. ತಾಯಿ ಮಗುವಿಗೆ ಜೀವ ನೀಡುವುದಷ್ಟೇ ಅಲ್ಲ, ಮಕ್ಕಳ ಆತ್ಮಜ್ಞಾನ ಮತ್ತು ಬದುಕಿನ ಬೆಳಕಾಗಿ ತಮ್ಮನ್ನೇ ಸಮರ್ಪಿಸಿಕೊಳ್ಳುತ್ತಾಳೆ ಎಂದು ತಾಯಿ ಪಾರ್ವತಿ ಮಕ್ಕಳ ಬಳಗದ ಉಪಾಧ್ಯಕ್ಷೆ ಜಯಲಕ್ಷ್ಮೀ ಮಹಾಂತಶೆಟ್ಟರ ಹೇಳಿದರು.

ಅವರು ಪಟ್ಟಣದ ಪಿಎಸ್‌ಬಿಡಿ ಬಾಲಕಿಯರ ಪ್ರೌಢಶಾಲೆಯಲ್ಲಿ 270 ವಿದ್ಯಾರ್ಥಿನಿಯರು ತಮ್ಮ ತಾಯಿಯಂದಿರಿಗೆ ಧನ್ಯತಾ ಭಾವದಿಂದ ಪಾದಪೂಜೆ ಮಾಡುವ ಕಾರ್ಯಕ್ರಮದ ವೇಳೆ ಮಾತನಾಡಿ, ಹಸುಗೂಸಿದ್ದಾಗಲೇ ತಾಯಂದಿರು ಅವರ ಭಾವನೆಗಳನ್ನು ಅರ್ಥೈಸಿಕೊಂಡು ಕಲಿಯಲು ಸನ್ನದ್ಧಗೊಳಿಸಿ ಸಮಾಜಕ್ಕೆ ಸಮರ್ಪಿಸುತ್ತಾಳೆ. ಮಕ್ಕಳಿಗೆ ಬಾಲ್ಯದಲ್ಲಿಯೇ ನಮ್ಮ ಸಂಸ್ಕೃತಿ, ಧರ್ಮ, ಸಂಬಂಧಗಳು, ಮಾನವೀಯ ಮೌಲ್ಯಗಳನ್ನು ಬಿತ್ತುತ್ತಾಳೆ. ಮಕ್ಕಳು ತಂದೆ-ತಾಯಿಯರ ಋಣ ತೀರಿಸಲು ಅಸಾಧ್ಯ. ಆದರೆ ಅವರ ಆಸೆ-ಕನಸುಗಳನ್ನು ಈಡೇರಿಸಬಹುದು. ಈ ನಿಟ್ಟಿನಲ್ಲಿ ಮಕ್ಕಳು ದೃಢ ಹೆಜ್ಜೆ ಇಡಬೇಕು ಎಂದರು.

ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ಪಟ್ಟಣದಲ್ಲಿ ಮಹಿಳೆಯರಿಂದಲೇ ಪ್ರಾರಂಭವಾದ ತಾಯಿ ಪಾರ್ವತಿ ಮಕ್ಕಳ ಬಳಗದ ಶಿಕ್ಷಣ ಸಂಸ್ಥೆ ಮಕ್ಕಳಿಗೆ ವಿದ್ಯೆಯೊಂದಿಗೆ ವಿನಯ, ಸಂಸ್ಕಾರ, ಮೌಲ್ಯಗಳನ್ನು ಕಲಿಸುತ್ತಿರುವುದು ಶ್ಲಾಘನೀಯ. ವಿದೇಶಿ ಸಂಸ್ಕೃತಿಗೆ ಮಾರು ಹೋಗುತ್ತಿರುವ ಕಾಲ ಘಟ್ಟದಲ್ಲಿ ನಮ್ಮ ಶ್ರೀಮಂತ ಸಂಸ್ಕೃತಿ, ಪರಂಪರೆ ಉಳಿಸುತ್ತಿರುವ ಶಾಲೆಯ ಕಾರ್ಯ ಎಲ್ಲರಿಗೂ ಪ್ರೇರಣೆಯಾಗಲಿ ಎಂದರು.

ಶಾಲೆಯ ದೈಹಿಕ ಶಿಕ್ಷಕ ಮೃತ್ಯುಂಜಯ ಹಿರೇಮಠ ಅವರ ಮಂತ್ರಘೋಷದೊಂದಿಗೆ ಪಾದಪೂಜೆ ಪ್ರಾರಂಭಗೊಂಡಿತು. ಮಕ್ಕಳು ತಾಯಿಯಂದಿರ ಪಾದಗಳನ್ನು ತೊಳೆದು ವಿಭೂತಿ, ಕುಂಕುಮ, ಅರಿಶಿನ ಹಚ್ಚಿ ಹೂವು ಸಮರ್ಪಿಸಿ ಶೃದ್ಧಾ-ಭಕ್ತಿಯಿಂದ ಪೂಜಿಸಿದರು. ನಂತರ ಶಾಲಾ ಆಡಳಿತ ಹಾಗೂ ಶಿಕ್ಷಕಿಯರು ತಾಯಿಯಂದಿರಿಗೆ ಉಡಿ ತುಂಬಿದರು.

ಈ ಕಾರ್ಯಕ್ರಮಕ್ಕೆ ಸಂಸ್ಥೆಯ ಅಧ್ಯಕ್ಷೆ ಸುವರ್ಣಾಬಾಯಿ ಬಹಾದ್ದೂರ್ ದೇಸಾಯಿ, ಕಾರ್ಯದರ್ಶಿ ರೋಹಿಣಿಬಾಯಿ ಬಹಾದ್ದೂರ್ ದೇಸಾಯಿ, ಶಾರಕ್ಕ ಮಹಾಂತಶೆಟ್ಟರ, ಶಕುಂತಲಾ ಹೊರಟ್ಟಿ, ಮುಖ್ಯ ಶಿಕ್ಷಕ ಜೆ.ಡಿ. ಲಮಾಣಿ ಸಚ್ಚಿದಾನಂದ ಮಠದ, ರಾಜೇಶ ಉಮಚಗಿ, ಡಿ.ಜಿ. ವೈದ್ಯ, ಪಿ.ಎಲ್. ಪಾಟೀಲ, ಎಸ್.ಎಂ. ಹಾದಿಮನಿ, ಕಾವ್ಯಾ ಬಹಾದ್ದೂರ ದೇಸಾಯಿ, ಶೀಲಾ ತಳವಾರ, ಶ್ವೇತಾ ಅಂಬಲಿ, ವಿದ್ಯಾರ್ಥಿನಿಯರು, ತಾಯಿಯಂದಿರು ಸಾಕ್ಷಿಯಾಗಿದ್ದರು.

# ಶ್ರೀ ವೀರಭದ್ರೇಶ್ವರ ಪಲ್ಲಕ್ಕಿ ಉತ್ಸವ

■ವಿಜಯಸಾಕ್ಷಿ ಸುದ್ದಿ, ನರಗುಂದ

ಇಲ್ಲಿನ ಶಿರೋಳ ಗ್ರಾಮದ ಜನತಾ ಕಾಲೋನಿಯ ಶ್ರೀ ವೀರಭದ್ರೇಶ್ವರ ದೇವಸ್ಥಾನದ 11ನೇ ವರ್ಷದ ವಾರ್ಷಿಕೋತ್ಸವದ ನಿಮಿತ್ತ ವೀರಭದ್ರೇಶ್ವರ ಪಲ್ಲಕ್ಕಿ ಉತ್ಸವ ಹಾಗೂ ಸಾಮೂಹಿಕ ವಿವಾಹ ಕಾರ್ಯಕ್ರಮ ಜರುಗಲಿದೆ. ಮಾತೋಶ್ರೀ ಅಕ್ಕಮಹಾದೇವಿ ಶರಣಮ್ಮನವರು, ಶಿವಯೋಗಾಶ್ರಮ ಶಿರೋಳ, ಮಹಾನ್ ದಾಸೋಹಿ ಶ್ರೀ ಕಲಬುರ್ಗಿ ಶರಣಬಸವೇಶ್ವರ ಪುರಾಣವನ್ನು ಜ. 26ರಿಂದ ಫೆ.3ರವರೆಗೆ ನೆಡೆಸಿಕೊಡುವರು. ಸಂಗೀತ ಸೇವೆ ಬಸವರಾಜ ವಿ.ಕುಪ್ಪಸ್ತ, ತಬಲಾ ಸೇವೆ ಗುರುಪಾದ ಭಜಂತ್ರಿ, ಗಾಯಕರು ಮಲ್ಲಣ್ಣ ಚಿಕ್ಕನರಗುಂದ, ಗುರುನಾಥ ಮೆಣಸಗಿ, ಬಸವರಾಜ ನಿ.ಮಡಿವಾಳರ ಸೇವೆ ಸಲ್ಲಿಸುವವರು. ಫೆ.4ರ ಮಧ್ಯಾಹ್ನ 12.20ಕ್ಕೆ ಜರುಗುವ ಸಾಮೂಹಿಕ ವಿವಾಹಕ್ಕೆ ಹೆಸರು ನೋಂದಾಯಿಸಿಕೊಳ್ಳುವವರು ಬಾಪೂಗೌಡ ತಿಮ್ಮನಗೌಡ್ರ-9902523011 ಇವರಲ್ಲಿ ವಧು-ವರರ ವಯಸ್ಸಿನ ದೃಢೀಕರಣ ಪತ್ರ, ಜನನ ಪ್ರಮಾಣ ಪತ್ರ ಹಾಗೂ 2 ಫೋಟೋಗಳೊಂದಿಗೆ ನೋಂದಾಯಿಸಿಕೊಳ್ಳಬೇಕು ಶರಣಪ್ಪ ಕಾಡಪ್ಪನವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಈ ಸಂದರ್ಭದಲ್ಲಿ ಶರಣಯ್ಯ ನಾಗಲೋಟಿಮಠ, ನಂದೀಶ ಕರಕಿಕಟ್ಟಿ, ರಾಜೇಸಾಬ ಚಳ್ಳಮರದ ಉಪಸ್ಥಿತರಿದ್ದರು.

## ಡಿಎಂಕೆ ಸರಕಾರಕ್ಕೆ ತೊಂದರೆ ನೀಡಲು ರಾಜ್ಯಪಾಲರ ನೇಮಕ

■ವಿಜಯಸಾಕ್ಷಿ ಸುದ್ದಿ, ತಮಿಳುನಾಡು

ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರವು ಡಿಎಂಕೆ ಸರ್ಕಾರಕ್ಕೆ ತೊಂದರೆ ನೀಡಲು ಮತ್ತು ತಮಿಳರನ್ನು ಅವಮಾನಿಸಲು ತಮಿಳುನಾಡು ರಾಜ್ಯಪಾಲ ಆರ್‌ಎನ್ ರವಿ ಅವರನ್ನು ನೇಮಿಸಿದೆ ಎಂದು ದ್ರಾವಿಡ ಮುನ್ನೇತ್ರ ಕಳಗಂ (ಡಿಎಂಕೆ) ಉಪ ಪ್ರಧಾನ ಕಾರ್ಯದರ್ಶಿ ಮತ್ತು ತೂತುಕುಡಿ ಸಂಸದೆ ಕನಿಮೊಳಿ ಅವರು ಆರೋಪಿಸಿದರು.

### ಪ್ರಾಥಮಿಕ, ಪ್ರೌಢಶಾಲಾ ಮಕ್ಕಳ ಚಿತ್ರಕಲಾ ಸ್ಪರ್ಧೆ ಉದ್ಘಾಟಿಸಿದ ಕೆ.ಎಸ್. ಪೂಜಾರ ಅಭಿಮತ

# ಸೃಜನಶೀಲತೆ ಹೆಚ್ಚಿಸಲು ಚಿತ್ರಕಲೆ ಸಹಕಾರಿ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಮಕ್ಕಳಲ್ಲಿ ಹುದುಗಿರುವ ಸೃಜನಶೀಲ ಕಲೆಯನ್ನು ಅಭಿವ್ಯಕ್ತಿಗೊಳಿಸಲು ಚಿತ್ರಕಲಾ ಸ್ಪರ್ಧೆ ಸಹಕಾರಿಯಾಗಲಿದೆ ಎಂದು ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ಅಭಿಪ್ರಾಯಪಟ್ಟರು.

ಇಲ್ಲಿಯ ಬಾಪೂಜಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಗ್ರಾಮ ಪಂಚಾಯಿತಿ, ಲಕ್ಕುಂಡಿ ಕಲಾತ್ಮಕ ಕಲಾವಿದ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಪ್ರಾಥಮಿಕ ಹಾಗೂ ಪ್ರೌಢಶಾಲಾ ಮಕ್ಕಳ ಚಿತ್ರಕಲಾ ಸ್ಪರ್ಧೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು. ಇಂತಹ ಕಾರ್ಯಕ್ರಮಗಳನ್ನು ಹೆಚ್ಚು ಹೆಚ್ಚಾಗಿ ಸಂಘಟಿಸಲು ಗ್ರಾ.ಪಂ ವತಿಯಿಂದ ಸಹಾಯ-ಸಹಕಾರ ನೀಡಲಾಗುವುದು. ಶೈಕ್ಷಣಿಕ ಕಾರ್ಯಕ್ರಮಗಳನ್ನು ನಡೆಸಲು ಆರ್ಥಿಕ ನೆರವು ನೀಡುವ ಭರವಸೆ ನೀಡಿದ ಅವರು, ಸ್ಪರ್ಧಾ ವಿಜೇತರಿಗೆ ಸಂವಿಧಾನ ಓದು ಪುಸ್ತಕಗಳನ್ನು ನೀಡಿದರು.

ಸಾಹಿತಿ ನೀಲಕಂಠ ಮುಕ್ಕಣ್ಣವರ ಮಾತನಾಡಿ, ಚಿತ್ರಕಲೆ ದೇಶದ ಗಡಿಗಳನ್ನು ಮೀರಿ ವಿಶ್ವವ್ಯಾಪಿಯಾಗಿ ಅರ್ಥವಾಗುವ ಜಾಗತಿಕ ಭಾಷೆಯಾಗಿದೆ. ಶಬ್ದ ಮತ್ತು ಅಕ್ಷರಗಳನ್ನು ಮೀರಿದ ಧ್ವನಿ ಚಿತ್ರಕಲೆಯಾಗಿದೆ. ರವಿವರ್ಮ, ಪಿಕಾಸೋ ಮುಂತಾದ ಚಿತ್ರಕಲಾವಿದರು ತಮ್ಮ ಚಿತ್ರಕಲೆಯ ಮೂಲಕ ಅದನ್ನು ಅನ್ನ ಸಂಪಾದನೆಯ ಮಾರ್ಗವಾಗಿ ಬೆಳೆಸಿದ್ದಾರೆ. ಚಿತ್ರಕಲೆಯು ಲಕ್ಷಾಂತರ ಕಲಾವಿದರಿಗೆ ಬದುಕಿನ ಸ್ಫೂರ್ತಿಯಾಗಿದೆ ಎಂದರು.



ಸಾಹಿತಿ ಎಂ.ಎಸ್. ಪೂಜಾರ, ಲಕ್ಕುಂಡಿಯ ಶಿಲ್ಪಕಲೆ ಮತ್ತು ಚಿತ್ರಕಲೆಯ ಕುರಿತು ತಮ್ಮದೇ ಆದ ಧಾಟಿಯಲ್ಲಿ ಆಶುಕವಿತೆಯ ಚುಟುಕುಗಳನ್ನು ಹೇಳಿ ಮಕ್ಕಳನ್ನು ರಂಜಿಸಿದರು. ಪ್ರಧಾನ ಗುರುಮಾತೆ ಆರ್.ಬಿ. ಬರದ್ವಾಡ ಅಧ್ಯಕ್ಷತೆ ವಹಿಸಿದ್ದರು. ಕಿತ್ತೂರು ರಾಣಿ ಚನ್ನಮ್ಮ ವಸತಿ ಶಾಲೆಯ ವಿದ್ಯಾರ್ಥಿಗಳು ಪ್ರಾರ್ಥಿಸಿದರು. ನಿಂಗಪ್ಪ ಗಡಗಿ, ಗ್ರಾ.ಪಂ ಸದಸ್ಯರಾದ ರಜಿಯಾಬೇಗಂ ತಹಸೀಲ್ದಾರ, ಅಮೀನಬೇಗಂ ಹುಬ್ಬಳ್ಳಿ, ಕಳಕೇಶ, ಎನ್.ಕೆ. ಅಂಬಕ್ಕಿ, ಅಪ್ಪಣ್ಣ ಬಡಿಗೇರ, ನಾಗರಾಜ ಕಲಬಂಡಿ, ಷಣ್ಮುಖಪ್ಪ ಮದ್ನೂರ, ಕನಕಾ ಗಡಗಿ, ರಮೇಶ ಹಾದಿಮನಿ, ವೆಂಕಟೇಶ ನಾಗನೂರ, ಮುತ್ತುರಾಜ ಗಡ್ಡಿ, ನಾಗಲಿಂಗಪ್ಪ ಬಡಿಗೇರ, ಎಂ.ಆರ್. ಪಾಟೀಲ, ಸಿದ್ದು ಬಣವಿ, ಚಂದ್ರಹಾಸ ಕಟ್ಟಿಗ್ಗಾರ, ಮಂಜುನಾಥ ಹುಣಸಿಮರದ, ಅಶೋಕ ಗದಗಿನ, ಶ್ರೀಕಾಂತ ದೇಸಾಯಿ, ಚಂದ್ರು ಲಕ್ಕನಗೌಡ್ರ, ಮಹೇಶ ಸಂದಿಗೌಡ್ರ, ಎಂ.ಕೆ. ತಲಾಲಚೂರ ಹಾಜರಿದ್ದರು. ಬಿ.ಎಲ್. ಚವ್ಹಾಣ, ಪಿ.ಬಿ. ಬಂಡಿ, ಎಸ್.ವಿ. ಗುಂಜಳ, ಬಸವರಾಜ ನೆಲಜೇರಿ, ನಂದಾ ಪತ್ತಾರ, ಸುಮಲತಾ ಕವಲೂರ ನಿರ್ಣಾಯಕರಾಗಿ ಕಾರ್ಯ ನಿರ್ವಹಿಸಿದರು. ಚಿತ್ರಕಲಾ ಶಿಕ್ಷಕ ಆರ್.ಎಸ್. ಆಲೂರ ಪ್ರಾಸ್ತಾವಿಕ ಮಾತನಾಡಿದರು. ಬಸವರಾಜ ಗರ್ಜಪ್ಪನವರ, ರಫಿಯಾ ದಂಡಿನ ಕಾರ್ಯಕ್ರಮ ನಿರೂಪಿಸಿದರು. ಶರಣಪ್ಪ ಗರ್ಜಪ್ಪನವರ ವಂದಿಸಿದರು.

ಪ್ರಾಚಾರ್ಯ ಬಿ.ಎಲ್. ಚವ್ಹಾಣ ಮಾತನಾಡಿ, ಚಿತ್ರಕಲಾ ಸ್ಪರ್ಧೆಯ ಮೂಲಕ ನೂರಾರು ವಿದ್ಯಾರ್ಥಿಗಳನ್ನು ಕಲಾಸಕ್ತರನ್ನಾಗಿ ಮಾಡಿರುವ ಈ ಕಾರ್ಯಕ್ರಮ ಬಹಳ ಸೂಕ್ತವಾಗಿದೆ. ಇಂಥದೊಂದು ಕಾರ್ಯಕ್ರಮವನ್ನು ಆಯೋಜಿಸುವುದರ ಮೂಲಕ ಸಂಘಟಿಕರು ಒಳ್ಳೆಯ ಕಾರ್ಯ ಮಾಡಿದ್ದಾರೆಂದು ಶ್ಲಾಘಿಸಿದರು.

# ಸಮಾಜಕ್ಕೆ ಹಿರಿಯರ ಮಾರ್ಗದರ್ಶನ ಅವಶ್ಯಕ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮಾಜದಲ್ಲಿ ಹಿರಿಯರ ಪಾತ್ರ ಮುಖ್ಯವಾಗಿದ್ದು, ಅವರ ಮಾರ್ಗದರ್ಶನದಲ್ಲಿ ನಡೆದರೆ ಕಾರ್ಯಗಳು ಯಶಸ್ವಿಯಾಗುತ್ತವೆ. ಹಿರಿಯರು ಸಮಾಜ ಸೇವೆಯಲ್ಲಿ ತೊಡಗಿರುವುದು ಉತ್ತಮ ಬೆಳವಣಿಗೆಯಾಗಿದೆ ಎಂದು ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ಹೇಳಿದರು.




ಅವರು ಪಟ್ಟಣದ ಕರ್ನಾಟಕ ಸರಕಾರಿ ನಿವೃತ್ತ ನೌಕರರ ಕ್ಷೇಮಾಭಿವೃದ್ಧಿ ಅಸೋಸಿಯೆಷನ್ ವತಿಯಿಂದ ಮಂಗಳವಾರ ನಡೆದ ಸಂಘದ ಮಾಸಿಕ ಸಭೆ ಹಾಗೂ ವಿಜಯಪುರ ಜ್ಞಾನ ಯೋಗಾಶ್ರಮದ ಪೂಜ್ಯ ಶಿದ್ದೇಶ್ವರ ಸ್ವಾಮಿಗಳ 2ನೇ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಕರ್ನಾಟಕ ಸರಕಾರಿ ನಿವೃತ್ತ ನೌಕರರ ಕ್ಷೇಮಾಬಿವೃದ್ಧಿ ಅಸೋಸಿಯೆಷನ್ ಅವರು ಜಾಗದ ಬಗ್ಗೆ ಸೇರಿದಂತೆ ವಿವಿಧ ಬೇಡಿಕೆಗಳನ್ನು ಇಟ್ಟಿದ್ದು, ಅವುಗಳನ್ನು ಆಡಳಿತ ಮಂಡಳಿಯ ಗಮನಕ್ಕೆ ತಂದು ಈಡೇರಿಸುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡುವದಾಗಿ ಹೇಳಿದರು.

ಅಸೋಸಿಯೇಷನ್ ಉಪಾಧ್ಯಕ್ಷ ಪಿ.ಬಿ. ಕರಾಟೆ ಮಾತನಾಡಿ, ಪೂಜ್ಯ ಶ್ರೀ ಶಿದ್ದೇಶ್ವರ ಮಹಾಸ್ವಾಮಿಗಳಳವರು ಬಿಟ್ಟು ಹೋದ ವಿಚಾರಧಾರೆಗಳನ್ನು ಅಳವಡಿಸಿಕೊಳ್ಳಬೇಕು. ಅದೇ ರೀತಿ ಸಂಘವು ಬಲಾಢ್ಯವಾಗುತ್ತ ಬಂದಿದ್ದು, ಸಭೆ ನಡೆಸಲು ಸರಿಯಾದ ಸ್ಥಳವಕಾಶ ಇಲ್ಲದಂತಾಗಿದೆ. ದಿನದಿಂದ ದಿನಕ್ಕೆ ಸದಸ್ಯರ ಸಂಖ್ಯೆ ಹೆಚ್ಚುತ್ತಿದ್ದು, ಆದಷ್ಟು ಬೇಗ ಪುರಸಭೆದವರು ಸಂಘಕ್ಕೆ ಜಾಗದ ವ್ಯವಸ್ಥೆ ಮಾಡಿಕೊಡಬೇಕು ಎಂದು ವಿನಂತಿಸಿದರು.

ಕಾರ್ಯಕ್ರಮದಲ್ಲಿ ಸಂಘದಿಂದ ಶೈಲಾ ಆದಿ, ನಿವೃತ್ತ ನೌಕರರ ಸಂಘದ ನೂತನ ಸದಸ್ಯರಾದ ಎ.ಬಿ. ತಿಮ್ಮಾಪುರ, ಎ.ವೈ. ನವಲಗುಂದ, ಗುರುಪಾದಪ್ಪ ಗಜೇಂದ್ರಗಡ, ಎಸ್.ಎನ್. ಹೊಸಮನಿ ಅವರನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಸಂಘದ ಅಧ್ಯಕ್ಷ ಬಿ.ಎಸ್. ಈಳಗೇರ, ಗೌರವಾಧ್ಯಕ್ಷ ಸಿ.ಜಿ. ಹಿರೇಮಠ, ಆರ್.ಎನ್. ಪಂಚಬಾವಿ, ಪ್ರ.ಕಾರ್ಯದರ್ಶಿ ಎಸ್.ವಿ. ಅಂಗಡಿ ಸೇರಿದಂತೆ ನಿವೃತ್ತ ನೌಕರರು ಇದ್ದರು. ಎ.ಎಮ್. ಮಠದ ನಿರೂಪಿಸಿದರು.

# ಉಚಿತ ಕಣ್ಣಿನ ತಪಾಸಣೆ ಜ.10ಕ್ಕೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಆರ್ಥಿಕವಾಗಿ ಹಿಂದುಳಿದ ಬಡವರಿಗೆ ಉಚಿತ ಕಣ್ಣಿನ ತಪಾಸಣೆ ಹಾಗೂ ಶಸ್ತ್ರ ಚಿಕಿತ್ಸಾ ಶಿಬಿರವನ್ನು ಜ.10ರಂದು ಬೆಳಿಗ್ಗೆ 9 ಗಂಟೆಗೆ ಪಟ್ಟಣದ ಜ್ಯೋತಿ ನರ್ಸಿಂಗ್ ಆಸ್ಪತ್ರೆಯಲ್ಲಿ (ಡಾ. ಪಿ.ಡಿ. ತೋಟದ) ಹಮ್ಮಿಕೊಳ್ಳಲಾಗಿದ್ದು, ಈ ಕುರಿತು ಸಂಘಟಕರು ಮಂಗಳವಾರ ಭಿತ್ತಿಪತ್ರಗಳನ್ನು ಬಿಡುಗಡೆಗೊಳಿಸಿದರು.




ಕಂಚಿ ಕಾಮಕೋಟಿ ಮೆಡಿಕಲ್ ಟ್ರಸ್ಟ್, ಶಿವಮೊಗ್ಗ ಶಂಕರ ಕಣ್ಣಿನ ಆಸ್ಪತ್ರೆ, ತಾಲೂಕಾ ವೈದ್ಯರ ಸಂಘ, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಬಿಸಿ ಟ್ರಸ್ಟ್ ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ, ವಿಶ್ವ ಕಂಪ್ಯೂಟರ್ ಅಕಾಡೆಮಿ, ಕರ್ನಾಟಕ ರಾಜ್ಯ ಹಿರಿಯ ನಾಗರಿಕರ ಹಾಗೂ ನಿವೃತ್ತ ನೌಕರರ ಸಂಘ, ಲಕ್ಷ್ಮೇಶ್ವರ-ಶಿರಹಟ್ಟಿ ತಾಲೂಕಾ ಔಷಧ ವ್ಯಾಪಾರಸ್ಥರ ಸಂಘ, ವಿಶ್ವ ಆರೋಗ್ಯ ಸಂಸ್ಥೆ ಲಕ್ಷೇಶ್ವರ ಇವುಗಳ ಸಂಯುಕ್ತ ಆಶ್ರಯದಲ್ಲಿ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಆಸಕ್ತರು ಇದರ ಸದುಪಯೋಗಪಡಿಸಿಕೊಳ್ಳಬೇಕು ಎಂದು ಸಂಘಟಿಕರು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಧರ್ಮಸ್ಥಳ ಯೋಜನೆಯ ಯೋಜನಾಧಿಕಾರಿ ಪುನೀತ್ ಓಲೇಕಾರ, ಡಾ. ಪಿ.ಡಿ. ತೋಟದ, ಸಿ.ಆರ್. ಲಕ್ಕುಂಡಿಮಠ, ಡಾ. ಪ್ರಸನ್ನ ಕುಲಕರ್ಣಿ, ಡಾ. ಎ.ಎಚ್. ಅಮರಶೆಟ್ಟಿ, ಬಸವರಾಜ ಸಂಗಪ್ಪಶೆಟ್ಟರ, ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಸಂಘದ ವಲಯ ಮೇಲ್ವಿಚಾರಕರಾದ ಶ್ರುತಿ, ರೇಣುಕಾ, ವಾಯಿದಾ ಮುಂತಾದವರಿದ್ದರು.

### ಕನ್ನಡ ಮತ್ತು ಸಂಸ್ಕೃತಿ ಸಂಭ್ರಮ-2025 ಸಮಾರಂಭದಲ್ಲಿ ಅಂದಾನೆಪ್ಪ ವಿಭೂತಿ

# ಕನ್ನಡ ಪ್ರೀತಿಯೇ ಕನ್ನಡಿಗರಿಗೆ ಶಾಶ್ವತ

■ವಿಜಯಸಾಕ್ಷಿ ಸುದ್ದಿ, ಗದಗ

ವಿಶ್ವದೆಲ್ಲೆಡೆ ಕರ್ನಾಟಕ ಹೆಸರಾಗಿದೆ, ಜೊತೆಗೆ ಕನ್ನಡ ನುಡಿ ಪ್ರತಿಯೊಬ್ಬ ಕನ್ನಡಿಗನ ಉಸಿರಾಗಬೇಕು. ಕನ್ನಡವನ್ನು ಪ್ರೀತಿಸಬೇಕು. ಯಾಕೆಂದರೆ ಕನ್ನಡ ನಮ್ಮ ನಾಡಿ ಮಿಡಿತ, ಹೃದಯದ ಬಡಿತ, ಮಾತೃ ಪ್ರೇಮದ ತುಡಿತ ಹಾಗೂ ಬದುಕಿನ ದುಡಿತ. ಕನ್ನಡ ಪ್ರೀತಿಯೇ ಕನ್ನಡಿಗರಿಗೆ ಶಾಶ್ವತ ಎಂದು ವಿಭೂತಿ ಪತ್ರಿಕೆಯ ಸಂಪಾದಕ, ಹಿರಿಯ ಸಾಹಿತಿ ಅಂದಾನೆಪ್ಪ ವಿಭೂತಿ ಅಭಿಪ್ರಾಯ ವ್ಯಕ್ತಪಡಿಸಿದರು.

ಅವರು ಇಲ್ಲಿನ ಚಿಕ್ಕಟ್ಟಿ ಶಾಲೆಯ ಸಭಾಭವನದಲ್ಲಿ, ಉತ್ತರ ಕರ್ನಾಟಕ ಕಲಾವಿದರ ಹಾಗೂ ಕಲಾ ಪೋಷಕರ ಸಂಘಟನೆ 'ಕಲಾ ವಿಕಾಸ ಪರಿಷತ್' ಗದಗ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಕನ್ನಡ ಮತ್ತು ಸಂಸ್ಕೃತಿ ಸಂಭ್ರಮ-2025 ಸಮಾರಂಭದಲ್ಲಿ 'ಹೆಸರಾಯಿತು ಕರ್ನಾಟಕ' ಎನ್ನುವ ವಿಷಯದ ಮೇಲೆ ಉಪನ್ಯಾಸ ನೀಡಿದರು.



ಡಾ. ಬಿಡಿನಹಾಳ ತಮ್ಮ ಬಾಲ್ಯದ ಬಡತನವನ್ನು ಬಿಚ್ಚಿಟ್ಟು, ಪಟ್ಟ ಪರಿಶ್ರಮ ಮತ್ತು ತಂದೆ ತಾಯಿಗಳ ದೂರದೃಷ್ಟಿಯನ್ನು ಸ್ಮರಿಸಿಕೊಂಡರು. ಅಧ್ಯಕ್ಷೀಯ ನುಡಿಗಳನ್ನಾಡಿದ ಭಾರತೀಯ ಶಿಕ್ಷಣ ಸಂಸ್ಥೆಯ ಪ್ರೊ. ಡಾ. ಎಸ್.ವಾಯ್. ಚಿಕ್ಕಟ್ಟಿ ಅವರು ಕಲಾವಿಕಾಸ ಪರಿಷತ್ತಿನೊಂದಿಗಿನ ಬಹುವರ್ಷಗಳ ಸಾಂಸ್ಕೃತಿಕ ನಂಟನ್ನು ನೆನಪು ಮಾಡಿಕೊಂಡರು. ಕಲಾವಿಕಾಸ ಪರಿಷತ್ ಸಂಸ್ಥಾಪಕ ಕಾರ್ಯಾಧ್ಯಕ್ಷ ಸಿ.ಕೆ.ಎಚ್. ಕಡಣಿ ಶಾಸ್ತ್ರಿಗಳು ಪ್ರಾಸ್ತಾವಿಕ ನುಡಿಗಳನ್ನಾಡಿದರು. ಡಾ. ಪಂ. ಪುಟ್ಟರಾಜ ಸೇವಾ ಸಮಿತಿಯ ಅಧ್ಯಕ್ಷ ಪಂ. ಫಕೀರೇಶ್ವರ ಶಾಸ್ತ್ರಿಗಳು ಹಿರೇಮಠ (ಬೆಳ್ಳಟ್ಟಿ) ವೇದಿಕೆಯಲ್ಲಿ ಇದ್ದರು.

ಕನ್ನಡ ಉಪನ್ಯಾಸಕ, ಸಾಹಿತಿ ಶ್ರೀಶೈಲ ಬಡಿಗೇರ ಕಾರ್ಯಕ್ರಮ ನಿರೂಪಿಸಿದರು. ಸಭಾ ಕಾರ್ಯಕ್ರಮದ ನಂತರ ಹೇಮಾ ವೆಂಕಟೇಶ ಆಲ್ಕೋಡ ಇವರಿಂದ ಸುಗಮ ಸಂಗೀತ, ಗವಿಸಿದ್ಧಯ್ಯ ಹಳ್ಳಿಕೇರಿಮಠ ಇವರಿಂದ ಜಾನಪದ ಹಾಡುಗಾರಿಕೆ, ಪಾಪನಾಸಿಯ ಸುಧಾ ಪಾಟೀಲ್ ತಂಡದವರಿಂದ ಯೋಗ ಪ್ರದರ್ಶನ ಹಾಗೂ ಚಿಕ್ಕಟಿ ಸಮೂಹ ಶಾಲೆಯ ಮಕ್ಕಳಿಂದ ಭರತ ನಾಟ್ಯ, ಜಾನಪದ ನೃತ್ಯ ಪ್ರದರ್ಶನಗಳು ನಡೆದವು.

ಕಲಾ ವಿಕಾಸ ಪರಿಷತ್ ಪೋಷಕ ಡಾ. ಜಿ.ಬಿ. ಪಾಟೀಲ ಮಾತನಾಡಿ, ಕನ್ನಡ ದಿಗ್ಗಜ ಸಾಹಿತಿಗಳನ್ನು ಮತ್ತು ಅವರ ಸಾಂಸ್ಕೃತಿಕ ಪ್ರೀತಿಯನ್ನು ನೆನಪಿಸಿ, ಕಲಾವಿಕಾಸ ಪರಿಷತ್‌ನ ನಾಡ ನುಡಿಯ ಸೇವೆಯನ್ನು ಸ್ಮರಿಸಿಕೊಂಡರು. ಇದೇ ಸಂದರ್ಭದಲ್ಲಿ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಕಲಾ ವಿಕಾಸ ಪರಿಷತ್‌ನ ಹಿತೈಷಿಗಳೂ ಆದ ಖ್ಯಾತ ವೈದ್ಯ ಡಾ. ಜಿ.ಬಿ. ಬಿಡಿನಹಾಳ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

# ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಬಾಲ ಭವನದ ಕಚೇರಿ ಸಹಾಯಕರನ್ನು ತಾತ್ಕಾಲಿಕವಾಗಿ ಗೌರವಧನ ಆಧಾರದ ಮೇಲೆ ಆಯ್ಕೆ ಮಾಡಲು ಅರ್ಜಿ ಆಹ್ವಾನಿಸಲಾಗಿದೆ.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ಬಾಲ ಭವನ ಸಮಿತಿಯಿಂದ ಮಕ್ಕಳಿಗೆ ಸೃಜನಾತ್ಮಕ ಕಲೆ ಮತ್ತು ಕ್ರಿಯಾತ್ಮಕ ಚಟುವಟಿಕೆ, ಹಾಗೂ ಮಕ್ಕಳ ಕಲಾ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದ್ದು, ಗೌರವಧನ ಆಧಾರದ ಮೇಲೆ ಕಚೇರಿ ಸಹಾಯಕರ ಹುದ್ದೆಗೆ ಅರ್ಜಿ ಆಹ್ವಾನಿಸಿದ್ದು. ವಿದ್ಯಾರ್ಹತೆ : ದ್ವಿತೀಯ ಪಿಯುಸಿ ಮತ್ತು ಮೇಲ್ಪಟ್ಟ ವಿದ್ಯಾರ್ಹತೆಯೊಂದಿಗೆ ಕಂಪ್ಯೂಟರ್ ಜ್ಞಾನ ಕಡ್ಡಾಯವಾಗಿ ಹೊಂದಿರಬೇಕು ಹಾಗೂ ಸರಕಾರಿ ಯಾವುದೇ ಇಲಾಖೆಯಲ್ಲಿ ಕೆಲಸ ನಿರ್ವಹಿಸಿದ ಬಗ್ಗೆ ಅನುಭವ ಪ್ರಮಾಣ ಪತ್ರದೊಂದಿಗೆ ಅರ್ಜಿ ಸಲ್ಲಿಸಬೇಕು.

ಅರ್ಜಿ ಸಲ್ಲಿಸಲು ಜನವರಿ 17 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಮತ್ತು ಅರ್ಜಿ ನಮೂನೆಗಾಗಿ ಉಪನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಆಡಳಿತ ಭವನ ಕೊಠಡಿ ಸಂಖ್ಯೆ : 006 ಗದಗ ದೂರವಾಣಿ ಸಂಖ್ಯೆ : 08372-220711 ಇಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತಾಯಂದಿರ ದಿನಾಚರಣೆ ನಿಮಿತ್ತ ಪಾದಪೂಜೆ



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಪಾಪನಾಶಿಯ ಜೆ.ಜಿ. ಇಂಟರ್ನ್ಯಾಷನಲ್ ಸಿಬಿಎಸ್‌ಇ ಶಾಲೆಯಲ್ಲಿ ತಾಯಂದಿರ ದಿನಾಚರಣೆಯನ್ನು ಆಚರಿಸಲಾಯಿತು. ತಾಯಂದಿರ ಪಾದಪೂಜೆ ಕಾರ್ಯಕ್ರಮದ ಸಾನ್ನಿಧ್ಯವನ್ನು ಮಣಕವಾಡ ಸಂಸ್ಥಾನಮಠದ ಶ್ರೀ ಮ.ನಿ.ಪ್ರ ಅಭಿನವ ಮೃತ್ಯುಂಜಯ ಸ್ವಾಮೀಜಿಯವರು ವಹಿಸಿದ್ದರು.

ಅಧ್ಯಕ್ಷತೆಯನ್ನು ಐ.ಎಸ್. ಪೂಜಾರ ವಹಿಸಿಕೊಂಡಿದ್ದರು. ಉಪನ್ಯಾಸಕರಾಗಿ ಪೊಲೀಸ್ ಪಾಟೀಲ್ ಪಾಲ್ಗೊಂಡಿದ್ದರು. ಕಾರ್ಯಕ್ರಮದ ಅತಿಥಿಗಳಾಗಿ ಅಖಿಲ್‌ಕುಮಾರ್ ಹಲಗತ್ತಿ, ಪ್ರಾಚಾರ್ಯ ಮದನ್, ಉಪಪ್ರಾಚಾರ್ಯ ಮಹಾಲಿಂಗ, ಬಸವರೆಡ್ಡಿ, ನಡೂರ್, ಕುಮಾರ್ ಪೂಜಾರ್, ಈಶ್ವರ ತಿಪ್ಪರೆಡ್ಡಿ, ಚಂದ್ರಕಾಂತ್ ಚವ್ಹಾಣ, ಬಸನಗೌಡ ಪಾಟೀಲ್ ಭಾಗವಹಿಸಿದ್ದರು.

### ಮದರಿಮಠ ಗೆಳೆಯರಿಂದ ವಿನೂತನ ರೀತಿಯಲ್ಲಿ ಜನ್ಮದಿನ ಆಚರಣೆ

# ಎತ್ತುಗಳಿಗೆ ತೌಡು, ಹಿಂಡಿ ವಿತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಗಣ್ಯ ವರ್ತಕರಾದ ಸದಾಶಿವಯ್ಯ ಮದರಿಮಠ ಅವರ 51ನೇ ಜನ್ಮದಿನವನ್ನು ಅವರ ಗೆಳೆಯರ ಬಳಗ, ಎಪಿಎಂಸಿಯ ವರ್ತಕರು ವಿನೂತನ ರೀತಿಯಲ್ಲಿ ಸೋಮವಾರ ಆಚರಿಸಿದರು.

ಎಪಿಎಂಸಿಯ ಚಕ್ಕಡಿಯವರಿಗೆ ಹಾಗೂ ಹಮಾಲರಿಗೆ ಉಪಹಾರದ ವ್ಯವಸ್ಥೆ, ಚಕ್ಕಡಿಯವರ ಎತ್ತುಗಳಿಗೆ ಸುಮಾರು 12 ಚೀಲ ತೌಡು, 10 ಚೀಲ ಶೇಂಗಾ ಹಿಂಡಿಯನ್ನು ಪಶು ಆಹಾರವಾಗಿ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಅಖಿಲ ಭಾರತ ವೀರಶೈವ ಮಹಾಸಭಾದ ಗದಗ ಜಿಲ್ಲಾ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ಮಾತನಾಡಿ, ಜನ್ಮದಿನ, ಮದುವೆ ವಾರ್ಷಿಕೋತ್ಸವ ಮುಂತಾದ ಸಂದರ್ಭಗಳಲ್ಲಿ ಕೇಕ್ ಕತ್ತರಿಸಿ ಮೋಜು-ಮಸ್ತಿಗೆ ಹಣ ದುಂದುವೆಚ್ಚ ಮಾಡದೇ ಈ ರೀತಿಯ ಒಳ್ಳೆಯ ಕಾರ್ಯಕ್ಕೆ ಸದ್ವಿನಿಯೋಗ ಮಾಡಲಾಗಿದೆ. ಕೊಟ್ಟಿದ್ದು ಅಲ್ಪವಾದರೂ ಇಂತಹ ಕಾರ್ಯ ಇನ್ನೊಬ್ಬರಿಗೆ ಮಾದರಿ, ಸ್ಫೂರ್ತಿ ನೀಡುವಂತಿದೆ ಎಂದು ಬಣ್ಣಿಸಿದರು.




ಗಣ್ಯ ವರ್ತಕರಾದ ಚಂದ್ರು ಬಾಳಿಹಳ್ಳಿಮಠ, ಚನ್ನಯ್ಯ ಹಿರೇಮಠ, ರಾಜು ಕುರಡಗಿ, ಸಾಮಾಜಿಕ ಕಾರ್ಯಕರ್ತರಾದ ರವಿ ಶಿದ್ಲಿಂಗ್ ಸೇರಿದಂತೆ ಹಲವರು ಸದಾಶಿವಯ್ಯ ಮದರಿಮಠ ಅವರ ಸಮಾಜಮುಖಿ ಕಾರ್ಯಗಳನ್ನು ಶ್ಲಾಘಿಸಿದರು.

ಚಕ್ಕಡಿಯವರ ಸಂಘದ ಉಪಾಧ್ಯಕ್ಷ ಸಲೀಂಸಾಹೇಬ ಮುಲ್ಲಾ ಸೇರಿದಂತೆ ಇತರ ಸದಸ್ಯರು, ಶ್ರಮಿಕರು, ಗದಗ ಜಿಲ್ಲಾ ಚೇಂಬರ್ ಆಫ್ ಕಾಮರ್ಸ್ ಅಧ್ಯಕ್ಷ ತಾತನಗೌಡ ಪಾಟೀಲ, ಕಾರ್ಯದರ್ಶಿ ಅಶೋಕ ಪಾಟೀಲ, ಎಸ್.ಪಿ. ಸಂಶಿಮಠ, ಹರೀಶ ಶಹಾ, ಗಂಗಾಧರ ಗಡ್ಡಿ, ಗುರು ತಡಸದ, ಶ್ರೀಧರ ಧರ್ಮಾಯತ, ಬಸವರಾಜ ಅಂಗಡಿ, ವ್ಹಿ.ಸಿ. ಬಳ್ಳೊಳ್ಳಿ, ವಿನೋದ ಭಾಂಡಗೆ, ಉಮೇಶ ಹುಬ್ಬಳ್ಳಿ, ಮಂಜು ಚನ್ನಪ್ಪನವರ, ವ್ಹಿ.ಕೆ. ಗುರುಮಠ, ಪರಶುರಾಮ ಹಬೀಬ, ಅಪ್ಪಣ್ಣ ಗೊಡಚಿ, ಪ್ರಕಾಶ ಉಗಲಾಟ, ಮುರುಘರಾಜೇಂದ್ರ ಬಡ್ನಿ, ಪ್ರಸಾದ ಶಿಗ್ಲಿಮಠ, ವಿಶ್ವನಾಥ ಯಳಮಲಿ, ಚನ್ನವೀರ ಹುಣಶೀಕಟ್ಟಿ, ಚನ್ನಯ್ಯ ಹಿರೇಹಾಳಮಠ, ಶಿವಲಿಂಗಶಾಸ್ತ್ರೀ ಸಿದ್ಧಾಪೂರ, ವಿನಾಯಕ ಪಾಟೀಲ, ಕುಮಾರ ಘಟ್ಟದ, ಮುತ್ತಣ್ಣ ಜಿನಗಾ, ಪರಶುರಾಮ ನಾಯ್ಕರ್, ವಿಜಯ ಗೊಡಚಿ, ನಿರಂಜನ ತಡಸದ ಸೇರಿದಂತೆ ಮುಂತಾದವರಿದ್ದರು.

ಸದಾಶಿವಯ್ಯ ಮದರಿಮಠ ಮಾತನಾಡಿ, ಗೆಳೆಯರ ಬಳಗ, ಎಪಿಎಂಸಿ ಮಾರುಕಟ್ಟೆಯ ವ್ಯಾಪಾರಸ್ಥರು ಸೇರಿ ಈ ರೀತಿಯ ವಿನೂತನ ಕಾರ್ಯಕ್ರಮವನ್ನು ಸಾಂಕೇತಿಕವಾಗಿ ಆಚರಿಸುವ ಮೂಲಕ ಸಮಾಜಮುಖಿಯಾಗಿ ಕಾರ್ಯ ಮಾಡುವಂತೆ ಸಂದೇಶ ರವಾನಿಸಿದ್ದಾರೆ. ಇದಕ್ಕಾಗಿ ಶ್ರಮಿಸಿದವರು ಅಭಿನಂದನಾರ್ಹರು ಎಂದರು.

# ಇಂದಿನಿಂದ ಅಡ್ನೂರು ಉರುಸ್

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಅಣ್ಣಿಗೇರಿ ತಾಲೂಕಿನ ಅಡ್ನೂರು ಗ್ರಾಮದ ಪವಾಡ ಪುರುಷ ಹಜರತ್ ಹುಸೇನ್ ಶ್ಯಾವಲಿ (ರಹ) ಶರಣರ 56ನೇ ವರ್ಷದ ಉರುಸ್ ಜ.8ರಿಂದ 14ರವರೆಗೆ ಜರುಗಲಿದೆ.

ಹಜರತ್ ಸಯ್ಯದ್ ಮಂಜೂರ ಹುಸೇನ್ ಶ್ಯಾವಲಿ ಅವರ ನೇತೃತ್ವದಲ್ಲಿ ನಡೆಯಲಿರುವ ಉರುಸಿನಲ್ಲಿ ಜ.8ರಂದು ಗಂಧದ ಮೆರವಣಿಗೆ, ಜ.9ರಂದು ಗುರುವಾರ ಉರುಸ್ ನಿಮಿತ್ತ ದರ್ಗಾದಲ್ಲಿ ವಿವಿಧ ಪೂಜಾ ವಿಧಿ ವಿಧಾನಗಳು ಹಾಗೂ ಸೀದಾ ಹಂಚಿಕೆ, ದೀಪೋತ್ಸವ ಮದ್ದು ಹಾರಿಸುವ ಕಾರ್ಯಕ್ರಮ ಜರುಗಲಿದೆ. ಜ.10ರಿಂದ 14ರವರೆಗೆ ಶಕ್ತಿ ಪ್ರದರ್ಶನ ಮತ್ತು ಕುಸ್ತಿ ಸ್ಪರ್ಧೆ ನಡೆಯಲಿವೆ.

ಏಳು ದಿನಗಳ ಕಾಲ ರಾತ್ರಿ ಕವ್ವಾಲಿ ಹಾಡುಗಾರಿಕೆ ವಾದ್ಯ ಮೇಳ ಹಾಗೂ ಸಂಗೀತ ಕಲಾವಿದರಿಂದ ಕಾರ್ಯಕ್ರಮಗಳು ಜರುಗಲಿವೆ ಎಂದು ಉರುಸ್ ಸಮಿತಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಲಕ್ಷ್ಮೇಶ್ವರದಲ್ಲಿ ಎಪಿಎಂಸಿ ವ್ಯಾಪಾರಸ್ಥರು, ಭಕ್ತರು ಬಾಳೆಹೊನ್ನೂರಿನ ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳ 69ನೇ ಜನ್ಮ ದಿನೋತ್ಸವ ಶ್ರದ್ಧಾ ಭಕ್ತಿಯಿಂದ ನೆರವೇರಿಸಿದರು. ಈ ವೇಳೆ ರುದ್ರಮುನಿ ಘಂಟಾಮಠ, ಸಂತೋಷ ಬಾಳಿಕಾಯಿ, ಮಹೇಶ್ವರ ಹಿರೇಮಠ, ಈರಣ್ಣ ಅಕ್ಕೂರ, ಎಸ್.ಬಿ. ಅಳಗುಂಡಗಿ, ಪ್ರದೀಪ ಕೊಟ್ಟೂರಶೆಟ್ಟರ, ಮಲ್ಲಣ್ಣ ಅಂಗಡಿ, ಬಸವರಾಜ ಜಾಲಗಾರ, ಭರತ ಬಾಕಳೆ, ಮನೋಹರ ಜಬಡಿ ಮುಂತಾದವರಿದ್ದರು.

### ಹಲವು ವರ್ಷಗಳಿಂದ ಸ್ಥಗಿತಗೊಂಡ ಕುಡಿಯುವ ನೀರು ಸರಬರಾಜು ಯೋಜನೆ

# ಸಾರ್ವಜನಿಕರ ತೆರಿಗೆ ಹಣ ನೀರುಪಾಲು

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ಮತ್ತು ಮುಳಗುಂದ ಪಟ್ಟಣ ಹಾಗೂ ಮಾರ್ಗಮಧ್ಯೆ 9 ಗ್ರಾಮಗಳಿಗೆ ತುಂಗಭದ್ರಾ ನದಿ ಮೂಲದಿಂದ ಯುಐಡಿಎಸ್‌ಎಸ್‌ಎಂಟಿ ಕುಡಿಯುವ ನೀರು ಸರಬರಾಜು ಯೋಜನೆಯು ಸಮರ್ಪಕ ನಿರ್ವಹಣೆ ಕೊರತೆಯಿಂದಲೋ ಅಥವಾ ಅಧಿಕಾರಿಗಳ ನಿರ್ಲಕ್ಷ್ಯ, ಬೇಜವಾಬ್ದಾರಿಯಿಂದಲೋ ಹಲವು ವರ್ಷಗಳಿಂದ ಸ್ಥಗಿತಗೊಂಡು, ಸಾರ್ವಜನಿಕರ ಕೋಟ್ಯಂತರ ತೆರಿಗೆ ಹಣ ಯೋಜನೆಗಾಗಿ ನೀರಿನಂತೆ ಹರಿದಿದ್ದು, ಸಾರ್ಥಕವಾಗಲಿಲ್ಲವೆಂಬುದು ಈ ಭಾಗದ ಪ್ರಜ್ಞಾವಂತರ ಅನಿಸಿಕೆಯಾಗಿದೆ.

2015ರಲ್ಲಿ ಅಂದು ಸಿಎಂ ಆಗಿದ್ದ ಸಿದ್ದರಾಮಯ್ಯ ಅವರು ಈ ಬೃಹತ್ ಯೋಜನೆಗೆ ಚಾಲನೆ ನೀಡಿದ್ದರು. ನಂತರದ ವರ್ಷಗಳಲ್ಲಿ ಶಿರಹಟ್ಟಿ ಮತ್ತು ಮುಳಗುಂದ ಸೇರಿದಂತೆ 9 ಗ್ರಾಮಗಳಿಗೆ ಈ ಯೋಜನೆಯಿಂದ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿತ್ತು. ಕಾಲಾಂತರದಲ್ಲಿ ನಿರ್ವಹಣೆ ಕೊರತೆಯಿಂದ ಆಗಿಂದಾಗ್ಗೆ ಸ್ಥಗಿತಗೊಳ್ಳುತ್ತಲೇ ಇತ್ತು. ಬೆಳ್ಳಟ್ಟಿ ಶುದ್ಧ ನೀರಿನ ಘಟಕದಲ್ಲಿ ಕೆಲಸ ಮಾಡುವ ಸಿಬ್ಬಂದಿಗಳಿಗೂ ಸಹ ಸರಿಯಾಗಿ ವೇತನ ಪಾವತಿ ಆಗಿರಲಿಲ್ಲ. ಅವರು ಸಹ ಘಟಕ ಸ್ಥಗಿತಗೊಳಿಸಿ ಅನೇಕ ಬಾರಿ ಸಂಬಂಧಿಸಿದ ಅಧಿಕಾರಿಗಳಿಗೆ ಮನವಿ ಸಲ್ಲಿಸಿದ್ದರೂ ಯಾವುದೇ ಪ್ರಯೋಜನವಾಗದೇ ಇದ್ದುದರಿಂದ ಘಟಕ ಸ್ಥಗಿತಗೊಂಡಿದ್ದು, ಮತ್ತೆ ಕಾರ್ಯಾರಂಭವಾಗಲೇ ಇಲ್ಲ.

ಈ ಯೋಜನೆಗೆ ಹೊಳೆ-ಇಟಗಿಯ ತುಂಗಭದ್ರಾ ನದಿಯಿಂದ ನೀರು ಸರಬರಾಜು ಮಾಡುವ ಉದ್ದೇಶ ಹೊಂದಲಾಗಿತ್ತು. ಇದಕ್ಕಾಗಿ ಬೆಳ್ಳಟ್ಟಿ



ಸಮೀಪ ನಿರ್ಮಾಣವಾಗಿದ್ದ ನೀರು ಶುದ್ಧೀಕರಣ ಘಟಕ ಸ್ಥಗಿತಗೊಂಡಿದ್ದರಿಂದ ಇಂದು ಅನೈತಿಕ ತಾಣವಾಗಿ ಮಾರ್ಪಡುತ್ತಿದ್ದು, ಈ ಭಾಗದ ಜನತೆ ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

ತಾಲೂಕಿನಾದ್ಯಂತ ಡಿಬಿಓಟಿ ಮತ್ತು ಎಂವಿಎಸ್ (ಮಲ್ಟಿ ವಿಲೇಜ್ ಸ್ಕೀಮ್) ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆ. ಸರಬರಾಜಿನಲ್ಲಿ ವ್ಯತ್ಯಯವಾದ ಸಂದರ್ಭದಲ್ಲಿ ತಾಲೂಕಾ ಮಟ್ಟದ ಅಧಿಕಾರಿಗಳು ಮತ್ತು ಗ್ರಾ.ಪಂ ಮಟ್ಟದ ಸಿಬ್ಬಂದಿಗಳು ಸರಿಪಡಿಸಿ ಜನತೆಗೆ ನೀರು ಪೂರೈಕೆ ಮಾಡುತ್ತಿದ್ದಾರೆ.

ತಾಲೂಕಿನ ಜನತೆಗೆ ಕುಡಿಯುವ ನೀರಿಗೆ ತುಂಗಭದ್ರಾ ನದಿಯೇ ಪ್ರಮುಖ ಆಸರೆಯಾಗಿದ್ದು, ಸದ್ಯ ಇರುವ ಎರಡೂ ಯೋಜನೆಗಳಲ್ಲಿಯೂ ತುಂಗಭದ್ರಾ ನದಿಯ ಮೂಲಕವೇ ಸರಬರಾಜು ಮಾಡಲಾಗುತ್ತಿದೆ. ನದಿಯಲ್ಲಿ ನೀರಿನ ಪ್ರಮಾಣ ಕಡಿಮೆ ಆಗುವ ಸಂದರ್ಭದವರೆಗೂ ನಿರಂತರವಾಗಿ ತಾಂತ್ರಿಕ ದೋಷಗಳನ್ನು ಹೊರತುಪಡಿಸಿ ಉಳಿದ ಸಮಯದಲ್ಲಿ ನೀರು ಪೂರೈಕೆಯಾಗುತ್ತಿದೆ.

ಈ ಕುರಿತು ಪ್ರತಿಕ್ರಿಯಿಸಿದ ಬೆಳ್ಳಟ್ಟಿ ಗ್ರಾ.ಪಂ ಮಾಜಿ ಅಧ್ಯಕ್ಷ ಹಾಲಿ ಸದಸ್ಯ ತಿಮ್ಮರಡ್ಡಿ ಮರಡ್ಡಿ, ಶಿರಹಟ್ಟಿ-ಮುಳಗುಂದ ಸೇರಿದಂತೆ 9 ಗ್ರಾಮಗಳ ಜನತೆಗೆ ವರದಾನವಾಗಬೇಕಿದ್ದ ಯೋಜನೆಯು ಸಮರ್ಪಕ ನಿರ್ವಹಣೆ ಕೊರತೆಯಿಂದಲೋ, ಅಧಿಕಾರಿಗಳ ನಿರ್ಲಕ್ಷ್ಯದಿಂದಲೋ ಸ್ಥಗಿತಗೊಂಡಿರುವುದು ಸಾರ್ವಜನಿಕರ ಕೋಟ್ಯಂತರ ತೆರಿಗೆ ಹಣ ಸದುಪಯೋಗವಾಗದೇ ಇರುವುದು ದುರ್ದೈವದ ಸಂಗತಿ. ಯೋಜನೆ ಸ್ಥಗಿತಗೊಂಡಿದ್ದರಿಂದ ಗ್ರಾಮದ ಶುದ್ಧೀಕರಣ ಘಟಕ ಇಂದು ಅನೈತಿಕ ತಾಣವಾಗಿ ಮಾರ್ಪಡುತ್ತಿದೆ. ಈ ಬಗ್ಗೆ ಈ ಕೂಡಲೇ ಸಂಬಂಧಿಸಿದ ಅಧಿಕಾರಿಗಳು ಸೂಕ್ತ ಕ್ರಮಕ್ಕೆ ಮುಂದಾಗಬೇಕು ಎಂದರು.

ಶಿರಹಟ್ಟಿ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಸಿದ್ದರಾಯ ಕಟ್ಟಿಮನಿ ಪ್ರತಿಕ್ರಿಯಿಸಿ, ಕೆಯುಡಬ್ಲ್ಯುಎಸ್ ಟೆಂಡರ್ ಕರೆದಿದ್ದು, ಸಧ್ಯದಲ್ಲಿಯೇ ರಿಪೇರಿ ಕೆಲಸ ಮುಗಿಸಿ ಸ್ಥಗಿತಗೊಂಡಿರುವ ನೀರು ಸರಬರಾಜು ಯೋಜನೆ ಮತ್ತೆ ಪ್ರಾರಂಭವಾಗಲಿದೆ ಎಂದರು.



### ಶ್ರೀ ಗವಿಸಿದ್ಧೇಶ್ವರ ಜಾತ್ರಾ ಮಹೋತ್ಸವ

# ಅಂಗಡಿ ಮುಂಗಟ್ಟುಗಳಿಗೆ ಸಿದ್ಧತೆ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಕೊಪ್ಪಳದ ಶ್ರೀ ಗವಿಸಿದ್ಧೇಶ್ವರ ಜಾತ್ರಾ ಮಹೋತ್ಸವಕ್ಕೆ ದಿನಗಣನೆ ಆರಂಭವಾಗಿದ್ದು, ಸಂಸ್ಥಾನ ಮಹಾರಥೋತ್ಸವದ ಅಂಗವಾಗಿ ಶ್ರೀ ಗವಿಮಠದ ಆವರಣದ ಮುಂಭಾಗದಲ್ಲಿ ಸುಮಾರು 12 ಎಕರೆ ವಿಸ್ತೀರ್ಣದ ಮೈದಾನದಲ್ಲಿ 900ರಿಂದ 1000 ಅಂಗಡಿಗಳಿಗೆ ವ್ಯವಸ್ಥೆ ಮಾಡಲಾಗಿದೆ.

ವೈವಿಧ್ಯಮಯವಾದ ಅಂಗಡಿ-ಮುಂಗಟ್ಟುಗಳನ್ನು ತೆರೆಯುವ ಕಾರ್ಯಗಳು ಭರದಿಂದ ಸಾಗಿವೆ. ಈ ಎಲ್ಲ ಅಂಗಡಿ



ಮುಂಗಟ್ಟುಗಳು ಶ್ರೀಮಠದ ಕಂಬಗಳಂತೆ ಕಾಣುವ 4 ವಿಶಿಷ್ಟ ಮಹಾದ್ವಾರಗಳನ್ನು ಶ್ರೀಗವಿಮಠದ ಸಂಸ್ಥಾಪಕ ಶಿವಯೋಗಿಗಳಾದ ರುದ್ರಮುನಿ ಮಹಾಸ್ವಾಮಿಗಳು, ಶಿವಶಾಂತವೀರ ಮಹಾಸ್ವಾಮಿಗಳು, ಮರಿಶಾಂತವೀರ ಮಹಾಸ್ವಾಮಿಗಳು ಹಾಗೂ ಗವಿಸಿದ್ಧೇಶ್ವರ ಮಹಾಸ್ವಾಮಿಗಳ ಹೆಸರಿನಲ್ಲಿ ನಿರ್ಮಾಣಗೊಳ್ಳುತ್ತಲಿವೆ. ಜಾತ್ರಾ ಸಮಯದಲ್ಲಿ ಅವು ಅತ್ಯಾಕರ್ಷಕವಾಗಿ ನೋಡುಗರ ಕಣ್ಮನಗಳನ್ನು ಸೆಳೆಯುವವು.

ಸ್ನಾನ ಮತ್ತು ಶೌಚಾಲಯಗಳ ವ್ಯವಸ್ಥೆ, ಪಾರ್ಕಿಂಗ್ ವ್ಯವಸ್ಥೆ, ಪೊಲೀಸ್ ಚೌಕಿ, ತುರ್ತು ಚಿಕಿತ್ಸಾ ಘಟಕ, ಮಕ್ಕಳಿಗೆ ಹಾಲುಣಿಸುವ ಕೇಂದ್ರ, ವೃದ್ಧ ಹಾಗೂ ಹಿರಿಯ ನಾಗರಿಕರಿಗೆ ವಿಶ್ರಾಂತಿ ಕೊಠಡಿ ಇತ್ಯಾದಿ ವ್ಯವಸ್ಥೆ ಮಾಡಲಾಗಿದೆ.

# 'ಸಂಜು ವೆಡ್ಸ್ ಗೀತಾ-2' ಪ್ರಚಾರ



■ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ಗದಗ ನಗರದ ಪ್ರವಾಸಿ ಮಂದಿರದಲ್ಲಿ ಸಂಜು ವೆಡ್ಸ್ ಗೀತಾ-2ರ ಚಿತ್ರತಂಡ ಚಿತ್ರದ ಪ್ರಚಾರಕ್ಕಾಗಿ ಆಗಮಿಸಿದ್ದರು. ಈ ಸಂದರ್ಭದಲ್ಲಿ ಚಿತ್ರದ ನಿರ್ಮಾಪಕ ಛಲವಾದಿ ಕುಮಾರ್ ಮಾತನಾಡಿ, ಈ ಹಿಂದೆ ಬಂದ ಸಂಜುವೆಡ್ಸ್ ಗೀತಾ ಚಿತ್ರವನ್ನು ಕರ್ನಾಟಕದ ಜನತೆ ಮೆಚ್ಚಿಕೊಂಡಿದ್ದಾರೆ. ಕರ್ನಾಟಕದಾದ್ಯಂತ ಹೌಸ್‌ಫುಲ್ ಪ್ರದರ್ಶನ ಕಂಡಿದ್ದು ಈಗ ಇತಿಹಾಸ. ಅಂತೆಯೇ ಭಾಗ-2ರ ಈ ಚಿತ್ರ ಅಷ್ಟೇ ಸೊಗಸಾಗಿ ಬಂದಿದೆ. ಚಿತ್ರದಲ್ಲಿರುವ ಎಲ್ಲಾ ಹಾಡುಗಳು ಚೆನ್ನಾಗಿ ಮೂಡಿಬಂದಿದೆ. ಕುಟುಂಬ ಸಮೇತರಾಗಿ ಕುಳಿತು ಯಾವುದೇ ಮುಜುಗುರವಿಲ್ಲದೇ ನೋಡುವ ಸಿನಿಮಾ ಇದಾಗಿದೆ ಎಂದು ತಿಳಿಸಿದರು.

ಸಂಜುವೆಡ್ಸ್ ಗೀತಾ ಭಾಗ-2ರ ಚಿತ್ರದ ನಾಯಕ ನಟ ನಗರ ಕಿಟ್ಟಿ ಮಾತನಾಡಿ, ಸಿನಿಮಾ ತುಂಬಾ ಚೆನ್ನಾಗಿ ಮೂಡಿಬಂದಿದೆ. ನಾಯಕಿಯಾಗಿ ರಚಿತಾರಾಮ್, ಹಾಸ್ಯ ನಟರಾಗಿ ಸಾಧುಕೋಕಿಲ ನಟಿಸಿದ್ದಾರೆ. ಸಂಜುವೆಡ್ಸ್ ಗೀತಾ ಭಾಗ-2 ಇದೇ ದಿನಾಂಕ 10ರಂದು ಪ್ರಪಂಚದಾದ್ಯಂತ ಬಿಡುಗಡೆಯಾಗುತ್ತಿದೆ. ಎಲ್ಲರೂ ಚಿತ್ರಮಂದಿರಕ್ಕೆ ಬಂದು ನೋಡಿ ಹಾರೈಸಿ ಎಂದರು.

ಬಸವರಾಜ ಕಡೇಮನಿ ಮಾತನಾಡಿ, ಹಿಂದೆ ಚಲನಚಿತ್ರ ನಿರ್ಮಾಣ ಒಬ್ಬರ ಸ್ವತ್ತಾಗಿತ್ತು. ಈಗ ಅದು ಸಾಮಾನ್ಯರ ಕೈಗೆ ತಲುಪಿ ಒಳ್ಳೆಯ ಚಿತ್ರಗಳನ್ನು ಮಾಡಲು ಪ್ರೇರೇಪಿಸುತ್ತದೆಂದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಛಲವಾದಿ ಮಹಾಸಭಾದ ಜಿಲ್ಲಾಧ್ಯಕ್ಷ ಆನಂದ ಶಿಂಗಾಡಿ, ಹಿರಿಯರಾದ ಗುರುಬಸಪ್ಪ ಬಿಳೆಯಲಿ, ದೇವಪ್ಪ ಬಣಕಾರ, ಶಂಭು ಹುನಗುಂದ, ಪರಮೇಶ ಕಾಳಿ, ರಾಮು ಬಾಗಲಕೋಟೆ, ಶರೀಫ್ ಬಿಳೆಯಲಿ, ಅನಿಲ್ ಕಾಳೆ, ಪರಶು ಕಾಳೆ, ಶಿವಾನಂದ ತಮ್ಮಣ್ಣವರ, ಶಿವಾನಂದ ಕರಿಯಣ್ಣವರ, ಗೋಪಾಲ ಕಾಳೆ, ಅಕ್ಷಯ ಬಿಳೆಯಲಿ ಮಲ್ಲು ಬಾರಕೇರ ಮುಂತಾದವರು ಉಪಸ್ಥಿತರಿದ್ದರು.

# ಅಂಗವಿಕಲರಲ್ಲಿನ ಕೀಳರಿಮೆ ಹೋಗಲಾಡಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮಾಜದಲ್ಲಿ ಅಂಗವಿಕಲರ ಬಗೆಗಿನ ತಾತ್ಸಾರ ಮನೋಭಾವವನ್ನು ತೊಡೆದು ಹಾಕಲು ಮತ್ತು ಅವರಲ್ಲಿನ ಕೀಳರಿಮೆಯನ್ನು ಹೋಗಲಾಡಿಸಿ ಸ್ವಾಭಿಮಾನದಿಂದ ಬಾಳಲು ಉತ್ತೇಜನ ನೀಡುವುದು ಅಂಗವಿಕಲರ ದಿನಾಚರಣೆಯ ಮುಖ್ಯ ಉದ್ದೇಶ ಎಂದು ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ ಹೇಳಿದರು.

ಅವರು ಪಟ್ಟಣದ ಪರ್ವತಮಲ್ಲಯ್ಯನ ದೇವಸ್ಥಾನದಲ್ಲಿ ಪುಲಿಗೆರೆ ಶ್ರೀ ಸೋಮೇಶ್ವರ ಅಂಗವಿಕಲರ ಸಂಘ, ಜಿಲ್ಲಾ ವಿಕಲಚೇತನರು ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಪುರಸಭೆ ಲಕ್ಷೇಶ್ವರ, ನಗರ



ಪುನರ್ವಸತಿ ಕಾರ್ಯಕರ್ತರ ಸಂಯುಕ್ತಾಶ್ರಯದಲ್ಲಿ ನಡೆದ ವಿಶ್ವ ವಿಕಲಚೇತನರ ದಿನಾಚರಣೆಯಲ್ಲಿ ಮಾತನಾಡಿದರು.

ಅಂಗವಿಕಲರು ಸ್ವಾವಲಂಬಿಯಾಗಿ ಬದುಕಬೇಕು. ಎಲ್ಲಾ ಕ್ಷೇತ್ರಗಳಲ್ಲಿ ಮುಂದೆ ಬರಬೇಕು. ಸರಕಾರದ ಸವಲತ್ತುಗಳನ್ನು ಸದುಪಯೋಗಪಡಿಸಿಕೊಂಡು ಉತ್ತಮ ಜೀವನ ನಡೆಸಬೇಕು ಎಂದು ಹೇಳಿದರು.

ಈ ವೇಳೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ವಕೀಲರಾದ ಎಸ್.ಪಿ. ಬಳಿಗಾರ, ರಾಮರಾವ್ ವೆರ್ಣೇಕರ, ಶಿಕ್ಷಕಿ ಮೈತ್ರಾದೇವಿ ಹಿರೇಮಠ, ವೀಣಾ ಸಾತಣ್ಣವರ ಅವರನ್ನು ಸನ್ಮಾನಿಸಲಾಯಿತು. ಹಿರಿಯ ವಕೀಲ ಆರ್.ಸಿ. ಪಾಟೀಲ, ಆಯ್.ಎಸ್. ಮಡಿವಾಳರ, ಪುಲಗೇರಿ ಸೋಮೇಶ್ವರ ಅಂಗವಿಕಲರ ಸಂಘ ಅಧ್ಯಕ್ಷ ಶಿವಲಿಂಗಪ್ಪ ಕುಂಬಾರ, ಶಿರಹಟ್ಟಿಯ ಎಮ್‌ಆರ್‌ಡಬ್ಲ್ಯೂ ಭಾರತಿ ಮೂರಶಿಳ್ಳಿ, ನಗರ ಪುನರವಸತಿ ಕಾರ್ಯಕರ್ತ ಮಂಜುನಾಥ ರಾಮಗೇರಿ, ಪರಮೇಶ ಬಳಿಗಾರ, ಶರಣಪ್ಪ ಶಿಳ್ಳಿನ, ನಾಗಪ್ಪ ಅಣ್ಣಿಗೇರಿ, ನಾಮದೇವ ಲಮಾಣಿ, ವನಜಾಕ್ಷಿ ಹಾಲಗಿಮಠ, ಬಸವರಾಜ ಅರ್ಕಸಾಲಿ, ಶರಣಪ್ಪ ಬಡ್ನಿ, ನಧಾಫ್ ಸೇರಿದಂತೆ ಸೋಮೇಶ್ವರ ಅಂಗವಿಕಲರ ಸಂಘದ ಸದಸ್ಯರು, ನಗರದ ವಿಕಲಚೇತನರು ಭಾಗವಹಿಸಿದ್ದರು.

# ರಾಷ್ಟ್ರಮಟ್ಟದ ಕರಾಟೆ ಸ್ಪರ್ಧೆಯಲ್ಲಿ ಸಾಧನೆ

■ವಿಜಯಸಾಕ್ಷಿ ಸುದ್ದಿ, ಗದಗ

ಹುಬ್ಬಳ್ಳಿ ನಗರದಲ್ಲಿ ಇತ್ತೀಚೆಗೆ ನಡೆದ ರಾಷ್ಟ್ರಮಟ್ಟದ ಕರಾಟೆ ಸ್ಪರ್ಧೆಯಲ್ಲಿ ಹುಲಕೋಟಿಯ ಚಾಂಪಿಯನ್ಸ್ ಕರಾಟೆ ಕ್ಲಬ್‌ನ ವಿದ್ಯಾರ್ಥಿಗಳು ಭಾಗವಹಿಸಿ ಒಟ್ಟು 59 ಪ್ರಶಸ್ತಿಗಳನ್ನು ತಮ್ಮದಾಗಿಸಿಕೊಂಡಿದ್ದು, ಕಟಾ ವಿಭಾಗದಲ್ಲಿ ಒಟ್ಟು 33 ಪ್ರಶಸ್ತಿಗಳು, ಕುಮಿಟೆ ವಿಭಾಗದಲ್ಲಿ ಒಟ್ಟು 26 ಪ್ರಶಸ್ತಿಗಳನ್ನು ಪಡೆದು ಈ ಸ್ಪರ್ಧೆಯಲ್ಲಿ ಚಾಂಪಿಯನ್ ಆಗಿ ಹೊರಹೊಮ್ಮಿದ್ದಾರೆ.

ಕಟಾ ಮತ್ತು ಕುಮಿಟೆ




ವಿಭಾಗದಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳಾದ ಸಂಪತ್, ಯಮನೂರ, ರಾಹುಲ್, ಲಿಖಿತ್, ಅನಿಕೇತ, ಮೈಲಾರಿ, ವಿನಾಯಕ, ಸಿದ್ಧರಾಮೇಶ, ಸಮರ್ಥ ಎನ್, ನಮಂತ್, ಸಮರ್ಥ ಎಚ್, ಪ್ರಶಾಂತ, ಅಕ್ಷಯ್, ನಿಂಗರಾಜ, ಮೊಹಮ್ಮದ್, ಯಶವಂತ್, ಮಲ್ಲಿಕಾರ್ಜುನ್ ಐ, ಚೇತನ್, ಕಾರ್ತಿಕ, ಮಲ್ಲಿಕಾರ್ಜುನ್ ಹೆಚ್, ಶ್ರೇಯಸ್, ದೀಕ್ಷಾ, ಜಯಶ್ರೀ, ವೈಷ್ಣವಿ, ವಿನಿತಾ, ಪ್ರಕೃತಿ, ಪೂರ್ವಿ, ಸೌಂದರ್ಯ, ಸೃಷ್ಟಿ, ಶಾಹಿನ, ವಿಕಾಸ್, ಶಶಿಕಾಂತ್, ವಿನಯ್ ಇವರಿಗೆ ಊರಿನ ಗುರು-ಹಿರಿಯರು ಮತ್ತು ಸ್ಪೋರ್ಟ್ಸ್ ಕ್ಲಬ್‌ನ ಅಧ್ಯಕ್ಷರು, ಸದಸ್ಯರು, ತರಬೇತುದಾರರಾದ ತಿರುಮಲ ಬಿಂಕದಕಟ್ಟಿ ಹಾಗೂ ಪಾಲಕರು ಅಭಿನಂದಿಸಿದ್ದಾರೆ.


## ಗ್ರಾಮ ಪಂಚಾಯತ ಕಾರ್ಯಾಲಯ ಕಲಕೇರಿ

**ತಾಲೂಕ: ಮುಂಡರಗಿ** kalakeri.mun.gdg@gmail.com **ಜಿಲ್ಲಾ: ಗದಗ**

**ಸಂ. ಗ್ರಾ. ಪಂ.ಕ/ ಮ.ಗಾಂ.ರಾ.ಗ್ರಾ.ಉ.ಖಾ. ಯೋಜನೆ/ದರಪಟ್ಟಿ/2024-25** **ದಿನಾಂಕ: 27/12/2024**

**ದರಪಟ್ಟಿ ಪ್ರಕಟಣೆ**

ಅಧ್ಯಕ್ಷರು/ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಕಲಕೇರಿ ಇವರ 2024-25ನೇ ಸಾಲಿನ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಪಾರ್ಮಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಅ. ನಂ | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ |
|---|---|---|
| 1 | ಕಲಕೇರಿ ಗ್ರಾಮದ ಚಾವಡಿಯಿಂದ ಬಸವೇಶ್ವರ ಸರ್ಕಲವರಗೆ ಸಿ.ಸಿ. ಗಟಾರ ನಿರ್ಮಾಣ | 3.08 |
| 2 | ಕಲಕೇರಿ ಗ್ರಾಮದ ಬಸವೇಶ್ವರ ಸರ್ಕಲದಿಂದ ಬಸ್‌ನಿಲ್ದಾಣದ ವರಗೆ ಸಿ ಸಿ ಗಟಾರ ನಿರ್ಮಾಣ | 3.90 |
| 3 | ಕಲಕೇರಿ ಗ್ರಾಮದ ಚಾವಡಿಯಿಂದ ಬಸವೇಶ್ವರ ಸರ್ಕಲವರಗೆ ಸಿ.ಸಿ. ರಸ್ತೆ ನಿರ್ಮಾಣ | 3.89 |
| 4 | ಕಲಕೇರಿ ಗ್ರಾಮದ ಬಸವೇಶ್ವರ ಸರ್ಕಲದಿಂದ ಯಕ್ಲಾಸಪೂರ ಮನೆಯವರಗೆ ಸಿ ಸಿ ರಸ್ತೆ ನಿರ್ಮಾಣ | 3.11 |
| 5 | ಕಲಕೇರಿ ಗ್ರಾಮದ ಯಕ್ಲಾಸಪೂರ ರವರ ಮನೆಯಿಂದ ಮುಲ್ಲಾ ಇವರ ಮನೆಯವರಗೆ ಸಿ ಸಿ ರಸ್ತೆ ನಿರ್ಮಾಣ | 1.56 |
| 6 | ಕಲಕೇರಿ ಗ್ರಾಮದ ಎಸ್.ಸಿ ಕಾಲೋನಿಯಲ್ಲಿ ಸಿಸಿ ಗಟಾರ ನಿರ್ಮಾಣ | 1.54 |
| 7 | ಕಲಿಕೇರಿ ಗ್ರಾಮ ಚೌಡಿ ಇಂದ ಸುನಿಲ್ ಮಕಂದರ್ ಮನೆಯವರಿಗೆ ಸಿಸಿ ರಸ್ತೆ ನಿರ್ಮಾಣ | 1.85 |
| 8 | ಕಲಕೇರಿ ಗ್ರಾಮದ ಇಮಾಮಸಾಬ ಇವರ ಹೊಲದಿಂದ ಚನ್ನಮ ದೇಸಾಯಿ ಇವರ ಹೊಲದವರೆಗೆ ರಸ್ತೆ ಅಭಿವೃದ್ಧಿ ಪಡಿಸುವದು | 1.03 |
| 9 | ವಿರೂಪಾಪೂರ ಗ್ರಾಮದ ಪಕ್ಕೀರಯ್ಯ ಶಿ ಅಯ್ಯನಗೌಡ್ರ ಇವರ ಮನೆ ಹತ್ತಿರ ಸಿ ಸಿ ರಸ್ತೆ ನಿರ್ಮಾಣ | 1.56 |
| 10 | ಕಲಕೇರಿ ಗ್ರಾಮದ ವಾರ್ಡ ನಂಬರ 3 ರಲ್ಲಿ ಸಿಸಿ ರಸ್ತೆ ನಿರ್ಮಾಣ | 3.11 |
| 11 | ವಿರುಪಾಪುರ ತಾಂಡಾ ಗ್ರಾಮದ ರಾಮಪ್ಪ ಲೋ ದೇಪಾವತ್ ಇವರ ಮನೆ ಹತ್ತಿರ ಸಿ.ಡಿ ನಿರ್ಮಾಣ | 1.54 |
| 12 | ಮುಷ್ಠಿಕೊಪ್ಪ ಗ್ರಾಮದ ಆಂಜನೇಯ ದೇವಸ್ತಾನದಿಂದ ಯಂಕಣ್ಣ ಪೂಜಾರ ಹೊಲದವರೆಗೂ ಸಿಸಿ ಗಟಾರ ನಿರ್ಮಾಣ | 1.54 |
| 13 | ಕಲಕೇರಿ ಗ್ರಾಮದ ಬಾವಿಹಳ್ಳಿ ಇವರ ಮನೆಯಿಂದ ಬೀಡನಾಳ ರಸ್ತೆವರೆಗೂ ಸಿಸಿ ಗಟಾರ ನಿರ್ಮಾಣ | 1.54 |
| 14 | ಕಲಕೇರಿ ಗ್ರಾಮದ ಪ್ರಭುರಾಜ ದೇಸಾಯಿ ಇವರ ಮನೆಯಿಂದ ಬಾವಿಹಳ್ಳಿ ಇವರ ಮನೆಯವರೆಗೆ ಸಿಸಿ ರಸ್ತೆ ನಿರ್ಮಾಣ | 1.56 |
| 15 | ಮುಷ್ಟಿಕೊಪ್ಪ ಗ್ರಾಮದ ಆಂಜನಯ್ಯ ದೇವಸ್ಥಾನದಿಂದ ಹಳ್ಳದ ರಸ್ತೆವರೆಗೆ ಸಿ.ಸಿ. ಗಟಾರ ನಿರ್ಮಾಣ | 1.41 |
| 16 | ಕಲಕೇರಿ ಗ್ರಾಮದ ಶ್ರೀ ಚನ್ನಮ್ಮ ಪಾಟಿಲ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಮುಂದೆ ಸಿ ಸಿ ಗಟಾರ ನಿರ್ಮಾಣ | 2.17 |

**ಷರಾ:** ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸವುದು ಹಾಗೂ ಪ್ರತಿ ಕಾಮಗಾರಿಯ ಖಾಲಿ ಟೆಂಡರ್ ಫಾರಂ ಬೆಲೆ **500 ರೂ.ಗಳು,** ನಿಗದಿಪಡಿಸಿದೆ ಅರ್ಹ ವೆಂಡರ್/ ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ಸ್ವೀಕರಿಸುವ ದಿನಾಂಕ: **08/01/2025** ರಿಂದ **14/01/2025** ರವರೆಗೆ ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ: **19/01/2025** ಮುಂಜಾನೆ 10.00 ಗಂಟೆಯಿಂದ ಮಧ್ಯಾಹ್ನ 2.30 ಗಂಟೆವರೆಗೆ ತೆರೆಯುವ ದಿನಾಂಕ **20/01/2025** ಸಮಯ ಮಧ್ಯಾಹ್ನ 3.00 ಗಂಟೆ.

1) ಷರತ್ತು/ ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಹಾಗೂ ರಜಾ ದಿನಗಳನ್ನು ಹೊರತುಪಡಿಸಿ ಗ್ರಾಮ ಪಂಚಾಯತ ಕಲಕೇರಿ ಯಿಂದ ಮಾಹಿತಿ ಪಡೆಯಬಹುದಾಗಿದೆ.

**ಸಹಿ/- ಪಂಚಾಯತಿ ಅಭಿವೃದ್ದಿ ಅಧಿಕಾರಿಗಳು ಗ್ರಾಮ ಪಂಚಾಯತ ಕಲಕೇರಿ**

**ಸಹಿ/- ಅಧ್ಯಕ್ಷರು ಗ್ರಾಮ ಪಂಚಾಯತ ಕಲಕೇರಿ**

ವಾ.ಸಾ.ಇ/ಗದಗ/518/ದೇಶಪಾಂಡೆಪಬ್ಲಿಸಿಟಿ/2024-25


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka